# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 02 ಸಂಚಿಕೆ – 68 | ಆರ್‌ಎನ್‌ಐ ನಂ: ಕೆಎಆರ್‌ಕೆಎಎನ್/2023/88462 | ಚಿತ್ರದುರ್ಗ | ದಿನಾಂಕ: 27–09–2024 ಶುಕ್ರವಾರ | ಪುಟ: 4 | ಬೆಲೆ : ರೂ.2–00
Volume - 02 Issue - 68 | RNI No: KARKAN/2023/88462 | Chitradurga | Date: 27-09-2024 Friday | Page: 4 | Price: Rs. 2-00



ಒಳಪುಟದ ಸುದ್ದಿಗಳು

ಜಾತಿ ಕರೆ ಸರ್ವೆ ಪೂರ್ಣಗೊಳಿಸಲು ಗಡುವು 2

ವಿದ್ಯಾರ್ಥಿಗಳು ರ್‍ಯಾಗಿಂಗ್ ಮರೆತು ವಿದ್ಯಾಭ್ಯಾಸದ ಕಡೆ ಗಮನಕೊಡಿ 3

ಕ್ರೀಡೆಯಲ್ಲಿ ಸೋಲು ಗೆಲುವು ಸಹಜ ಸಮಾನವಾಗಿ ಸ್ವೀಕರಿಸಿ: ಶಾಸಕ 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### ಕಾನೂನು ನೆರವು ಅಭಿರಕ್ಷಕರ ಕಚೇರಿ: ಗುತ್ತಿಗೆ ಆಧಾರದ ಮೇಲೆ ವಿವಿಧ ಹುದ್ದೆಗಳ ನೇಮಕಾತಿಗೆ ಅರ್ಜಿ

» ಚಿತ್ರದುರ್ಗ

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಕಾನೂನು ನೆರವು ಅಭಿರಕ್ಷಕರ ಕಚೇರಿಯಲ್ಲಿ ಗುತ್ತಿಗೆ ಆಧಾರದ ಮೇಲೆ ವಿವಿಧ ಹುದ್ದೆಗಳ ನೇಮಕಾತಿಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. 02 ಉಪ ಮುಖ್ಯ ಕಾನೂನು ನೆರವು ಅಭಿರಕ್ಷಕರ ಹುದ್ದೆ, 05 ಸಹಾಯಕ ಕಾನೂನು ನೆರವು ಅಭಿರಕ್ಷಕರ ಹುದ್ದೆ, 02 ಕಚೇರಿ ಸಹಾಯಕ ಹುದ್ದೆ, 02 ಜವಾನ ಹುದ್ದೆಗಳಿಗೆ ಗುತ್ತಿಗೆ ಆಧಾರದ ಮೇಲೆ ತಾತ್ಕಾಲಿಕ ನೇಮಕಾತಿ ಮಾಡಿಕೊಳ್ಳಲಾಗುವುದು. ಮುಖ್ಯ ಹಾಗೂ ಸಹಾಯಕ ಕಾನೂನು ನೆರವು ಅಭಿರಕ್ಷಕರ ಹುದ್ದೆಗಳ ನೇಮಕಾತಿ ಅವಧಿ 2 ವರ್ಷ ಹಾಗೂ ಕಚೇರಿ ಸಹಾಯಕ ಮತ್ತು ಜವಾನ ಹುದ್ದೆಗಳ ನೇಮಕಾತಿ ಅವಧಿ 6 ತಿಂಗಳು ಮಾತ್ರ. ಅರ್ಜಿ ಸಲ್ಲಿಸಲು ಅಕ್ಟೋಬರ್ 03 ಕೊನೆಯ ದಿನವಾಗಿದೆ. ಹುದ್ದೆಗಳ ನೇಮಕಾತಿಗೆ ನಿಗದಿ ಪಡಿಸಿದ ವಿದ್ಯಾಭ್ಯಾಸ, ಅನುಭವ, ಅರ್ಜಿ ನಮೂನೆ ಹಾಗೂ ನೇಮಕಾತಿ ವಿವರಗಳು ಸೇರಿದಂತೆ ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಕಚೇರಿಗೆ ಸಂಪರ್ಕಿಸಬಹುದು ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶ ಎಂ.ವಿಜಯ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಜಿಲ್ಲಾ ಮಟ್ಟದ ಮೇಲ್ವಿಚಾರಣಾ ಸಮಿತಿ ಸಭೆ

» ದಾವಣಗೆರೆ

ಪರಿಶಿಷ್ಟ ಜಾತಿ ಹಾಗೂ ಬುಡಕಟ್ಟು ಉಪಯೋಜನೆಯಡಿ ಅನುಷ್ಠಾನಗೊಳಿಸುತ್ತಿರುವ ಕಾರ್ಯಕ್ರಮಗಳ ಪರಿಶೀಲನಾ ಸಭೆಯು ಆಕ್ಟೋಬರ್ 3 ರಂದು ಬೆಳಿಗ್ಗೆ 10.30 ಕ್ಕೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜಿಲ್ಲಾಧಿಕಾರಿ ಜಿ.ಎಂ. ಗಂಗಾಧರಸ್ವಾಮಿ ಅವರ ಅಧ್ಯಕ್ಷತೆಯಲ್ಲಿ ನಡೆಯಲಿದೆ ಎಂದು ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಕರಾದ ನಾಗರಾಜ್ ತಿಳಿಸಿದ್ದಾರೆ.

### ಮೈಸೂರು ದಸರಾ ಕನ್ನಡ ಪುಸ್ತಕ ಮಾರಾಟ ಮೇಳ

» ದಾವಣಗೆರೆ

ಕನ್ನಡ ಪುಸ್ತಕ ಪ್ರಾಧಿಕಾರ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಮೈಸೂರು ದಸರಾ ಉತ್ಸವ ಸಮಿತಿ, ಮೈಸೂರು ಇವರ ಸಂಯುಕ್ತಾಶ್ರಯದಲ್ಲಿ ಆಕ್ಟೋಬರ್ 3 ರಿಂದ 11 ರವರೆಗೆ ಸ್ಕೌಟ್ಸ್ ಮತ್ತು ಗೈಡ್ಸ್ ಮೈದಾನ, ಹಳೇ ಡಿ.ಸಿ. ಕಚೇರಿ ಎದುರು, ಮೈಸೂರು ಇಲ್ಲಿ ಪುಸ್ತಕ ಮಾರಾಟ ಮೇಳ ಏರ್ಪಡಿಸಲಾಗಿದೆ. ಈ ಪುಸ್ತಕ ಮೇಳದಲ್ಲಿ ಭಾಗವಹಿಸಲು ಇಚ್ಚಿಸುವ ಪ್ರಕಾಶಕರು, ಮಾರಾಟಗಾರರು ನಿಗದಿತ ಅರ್ಜಿ ನಮೂನೆಯನ್ನು ಕನ್ನಡ ಪುಸ್ತಕ ಪ್ರಾಧಿಕಾರ, ಕನ್ನಡ ಭವನ, ಜೆ.ಸಿ.ರಸ್ತೆ, ಬೆಂಗಳೂರಿನ ಕಚೇರಿ ಅಥವಾ ಆಯಾ ಜಿಲ್ಲೆಯ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರ ಕಚೇರಿಯಲ್ಲಿ ಅಥವಾ ಪ್ರಾಧಿಕಾರದ ವೆಬ್‌ಸೈಟ್‌ನಲ್ಲಿ https://kpp.karnataka.gov.in ನಲ್ಲಿ ಪಡೆದು ಸಾವಿರ ರೂಗಳ ಭದ್ರತಾ ಠೇವಣಿಯ ಡಿ.ಡಿ.ಯನ್ನು ಕನ್ನಡ ಪುಸ್ತಕ ಪ್ರಾಧಿಕಾರ, ಕನ್ನಡ ಭವನ ಜೆ.ಸಿ.ರಸ್ತೆ, ಬೆಂಗಳೂರು ಇವರ ಹೆಸರಿಗೆ ಪಡೆದು ಸೆಪ್ಟಂಬರ್ 30 ರೊಳಗೆ ಅಂಚೆ ಮೂಲಕ ಹಾಗೂ ಇ–ಮೇಲ್ kannadappradhikara@gmail.com ಮೂಲಕ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ದೂ.ಸಂ 080–22484516, 22107704 ಸಂಪರ್ಕಿಸಲು ತಿಳಿಸಲಾಗಿದೆ.

### ತ್ರೈಮಾಸಿಕ ಸಭೆ

» ದಾವಣಗೆರೆ

ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ವರ್ಗದ ಜನಾಂಗದವರ ಮೇಲಿನ ದೌರ್ಜನ್ಯ ತಡೆ ಕಾಯ್ದೆಯನ್ವಯ ಜಿಲ್ಲಾ ಜಾಗೃತಿ ಮತ್ತು ಉಸ್ತುವಾರಿ ಸಮಿತಿಯ ಮೂರನೇ ತ್ರೈಮಾಸಿಕ ಸಭೆಯನ್ನು ಅಕ್ಟೋಬರ್ 3 ರಂದು ಮಧ್ಯಾಹ್ನ 12 ಗಂಟೆಗೆ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಹಾಗೂ ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ ಅವರ ಅಧ್ಯಕ್ಷತೆಯಲ್ಲಿ ನಡೆಯಲಿದೆ ಎಂದು ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಕರಾದ ನಾಗರಾಜ್ ತಿಳಿಸಿದ್ದಾರೆ.

## ರಾಜ್ಯಾದ್ಯಂತ ಕೆಲಸ ಬಹಿಷ್ಕರಿಸಿ ಬೇಡಿಕೆಗಳ ಈಡೇರಿಕೆಗೆ ಒತ್ತಾಯ

# ಸರ್ಕಾರಕ್ಕೆ ಗ್ರಾಮ ಆಡಳಿತಧಿಕಾರಿಗಳ ಬಿಸಿ



» ನಮ್ಮಜನ ಸಮಾಚಾರ

ಚಿತ್ರದುರ್ಗ: ಗ್ರಾಮ ಆಡಳಿತಾಧಿಕಾರಿಗಳು ತಮ್ಮ ಕೆಲಸ ಬಹಿಷ್ಕರಿಸಿ ವಿವಿಧ ಬೇಡಿಕೆ, ಮೂಲ ಸೌಲಭ್ಯ ಕಲ್ಪಿಸುವಂತೆ ಸರ್ಕಾರಕ್ಕೆ ಆಗ್ರಹಿಸಿ ಧರಣಿಯನ್ನು ಆರಂಭಿಸಿದ್ದಾರೆ.

ಇಂದಿನಿಂದ ರಾಜ್ಯಾದ್ಯಾದಂತ್ಯ ಕರ್ನಾಟಕ ರಾಜ್ಯ ಗ್ರಾಮ ಆಡಳಿತಧಿಕಾರಿ ಸಂಘದವತಿಯಿಂದ ಶಾಂತಿಯುತ ಅನಿರ್ಧಿಷ್ಟಾವದಿಯ ಮುಷ್ಕರವನ್ನು ನಗರದ ತಹಶೀಲ್ದಾರ್ ಕಚೇರಿ ಮುಂಭಾಗ ಹಮ್ಮಿಕೊಂಡಿದ್ದಾರೆ.

ಕ್ಷೇತ್ರಗಳಲ್ಲಿ ನಿರಂತರವಾಗಿ ಕರ್ತವ್ಯ ನಿರ್ವಹಿಸುತ್ತಿರುವ ಗ್ರಾಮ ಆಡಳಿತಾಧಿಕಾರಿಗಳಿಗೆ ಯಾವುದೇ ರೀತಿಯ ಮೂಲಭೂತ ಸೌಲಭ್ಯ ಇಲ್ಲದೆ ಕಾರ್ಯ ನಿರ್ವಹಿಸುತ್ತಿದ್ದಾರೆ. ಕೆಲಸದ ಒತ್ತಡವು ಹೆಚ್ಚಾಗಿದ್ದು ಸರ್ಕಾರದಿಂದ ಯಾವುದೇ ಸೌಲಭ್ಯಗಳು ದೊರೆತಿಲ್ಲ. ಕೆಲಸದ ಒತ್ತಡ ದಿಂದ ಕಾರ್ಯನಿರ್ವಹಿಸಲು ಆಗದೆ ಅಧಿಕಾರಿಗಳು ಸಾವು ನೋವು ಉಂಟಾಗಿದೆ. ಬೆಳಿಗ್ಗೆ 6 ಗಂಟೆಯಿಂದ ಸಂಜೆ 8 ಗಂಟೆಯವರೆಗೆ ಕೆಲಸ ನಿರ್ವಹಿಸುತ್ತಿದ್ದು, ನಮಗೆ ಸರ್ಕಾರ ಯಾವುದೇ ರೀತಿಯ ಸೌಲಭ್ಯ ನೀಡುತ್ತಿಲ್ಲ. ಆದ್ದರಿಂದ ಮುಷ್ಕರ ಕೈಗೊಳ್ಳಲಾಗಿದೆ. ಗ್ರಾಮ ಆಡಳಿತ ಅಧಿಕಾರಿಗಳು ಕರ್ತವ್ಯ ನಿರ್ವಹಿಸುತ್ತಿರುವ ಎಲ್ಲ ಬಗೆಯ ಮೊಬೈಲ್ ಗಳನ್ನು ಇಂದಿನಿಂದ ಸ್ಥಗಿತಗೊಳಿಸಲಾಗು ವುದು ಎಂದು ಜಿಲ್ಲಾಧ್ಯಕ್ಷರಾದ ಮಾಲತೇಶ್ ಮುದ್ದಜ್ಜಿ ತಿಳಿಸಿದ್ದಾರೆ. ಕರ್ನಾಟಕ ರಾಜ್ಯ ಗ್ರಾಮ ಆಡಳಿತ ಅಧಿಕಾರಿಗಳ ಸಂಘದವತಿಯಿಂದ ಇಂದಿನಿಂದ ರಾಜ್ಯದ್ಯಂತ ಕೆಲಸ ಬಹಿಷ್ಕರಿಸಿ ಮುಷ್ಕರ ನಡೆಸಲು ಸೆ. 22 ರಂದು ನಡೆದ ರಾಜ್ಯ ಕಾರ್ಯಕಾರಣಿ ಸಭೆಯಲ್ಲಿ ತೀರ್ಮಾನದಂತೆ ಇಂದಿನಿಂದ ತಾಲೂಕಿನ ಎಲ್ಲಾ ತಾಲೂಕು ಕಚೇರಿಗಳು ಮತ್ತು ಜಿಲ್ಲಾಧಿಕಾರಿಗಳ ಕಚೇರಿ ಮುಂದೆ ಅನಿರ್ದಿಷ್ಟಾವಧಿ ಮುಷ್ಕರ ನಡೆಸಲಾಗುತ್ತಿದೆ.

**ಗ್ರಾಮ ಆಡಳಿತಾಧಿಕಾರಿಗಳ ವಿವಿಧ ಬೇಡಿಕೆಗಳು:** ಗ್ರಾಮ ಆಡಳಿತ ಅಧಿಕಾರಿಗಳ ಹುದ್ದೆಯನ್ನು ತಾಂತ್ರಿಕ ಹುದ್ದೆಗಳಿಗೆ ನೀಡುವ ವೇತನ ಶ್ರೇಣಿ ನಿಗದಿಪಡಿಸಿ ಆದೇಶ ನೀಡಬೇಕು.ಕಂದಾಯ ಇಲಾಖೆಯಿಂದ ನಿರಂತರವಾಗಿ ಸರ್ಕಾರದಿಂದ ಅಭಿವೃದ್ಧಿಪಡಿಸಿರುವ ಎಲ್ಲಾ ವೆಬ್/ಮೊಬೈಲ್ ತಂತ್ರಾಂಶಗಳಿಗೂ ಮೂಲಕ ಕರ್ತವ್ಯನಿರ್ವಹಿಸುತ್ತಿರುವುದರಿಂದಹಾಗೂ ಸಿ–ವೃಂದ ನೌಕರರ ಹತ್ತು ಪಟ್ಟು ಕೆಲಸಗಳ ಜವಾಬ್ದಾರಿಯನ್ನು ವಹಿಸುತ್ತಿರುವುದರಿಂದ ಗ್ರಾಮ ಆಡಳಿತ ಅಧಿಕಾರಿಗಳ ಹುದ್ದೆಯನ್ನು ತಾಂತ್ರಿಕ ಹುದ್ದೆಗಳಿಗೆ ನೀಡುವ ವೇತನ ಶ್ರೇಣಿಯನ್ನು ನೀಡಬೇಕು.ಕೆಲಸ ನಿರ್ವಹಿಸಲು ಅಗತ್ಯವಾದ ಗ್ರಾಮ ಆಡಳಿತ ಅಧಿಕಾರಿಗಳಿಗೆ ಸುಸಜ್ಜಿತವಾದ ಕಛೇರಿ ಮತ್ತು ಉತ್ತಮ ಗುಣಮಟ್ಟದ ಟೇಬಲ್ ಮತ್ತು ಕುರ್ಚಿ ಮತ್ತು ಅಲ್ಲೈರಾ ಅತ್ಯುತ್ತಮ ಗುಣಮಟ್ಟದ ಮೊಬೈಲ್ ಫೋನ್ (12ಜಿಬಿ/256ಜಿಬಿ), ಸಿಯುಜಿ ಸಿಮ್ ಮತ್ತು ಡೇಟಾಗೂಗಲ್ ಕ್ರೋಮ್ ಬುಕ್/ಲ್ಯಾಪ್ ಟಾಪ್ ಪ್ರಿಂಟರ್ ಮತ್ತು ಸ್ಕ್ಯಾನರ್ ಸೇರಿ ಮೂಲಭೂತ ಸೌಲಭ್ಯಗಳನ್ನು ಕಲ್ಪಸುವಂತೆ ಆಗ್ರಹಿಸಲಾಯಿತು.

ಸೇವಾ ವಿಷಯಗಳಿಗೆ ಸಂಬಂಧಿಸಿದಂತೆ ಮೊಬೈಲ್ ತಂತ್ರಾಂಶಗಳ ಕೆಲಸದ ವಿಚಾರವಾಗಿ ಇದುವರೆಗೂ ಆಗಿರುವ ಎಲ್ಲಾ ಅಮಾನತುಗಳನ್ನು ತಕ್ಷಣವೇ ರದ್ದುಪಡಿಸಿ ಹಿಂಪಡೆಯ ಬೇಕು.

ಕೆ.ಸಿ.ಎಸ್.ಆರ್ ನಿಯಮಾವಳಿಗಳಂತೆ ಸರ್ಕಾರಿ ರಜಾ ದಿನಗಳಲ್ಲಿ ಕರ್ತವ್ಯಕ್ಕೆ ಮೆಮೋ ಹಾಕದಿರಲು, ಹಾಗೂ ಮೆಮೋ ಹಾಕುವ ಅಧಿಕಾರಿಗಳ ವಿರುದ್ಧ ಸೂಕ್ತ ಕ್ರಮ ಜರುಗಿಸುವಂತೆ ಸೂಕ್ತ ಆದೇಶ ನೀಡಬೇಕು. ಕರ್ನಾಟಕ ಉಚ್ಚನ್ಯಾಯಾಲಯದ ರಿಟ್ ಪಿಟಿಷನ್ ಸಂಖ್ಯೆ: 329/23 ರ ಅಂತಿಮ ತೀರ್ಪಿಗೆ ಒಳಪಡಿಸಿ ರಾಜ್ಯಾದ್ಯಂತ ಎಲ್ಲಾ ಜಿಲ್ಲೆಗಳಲ್ಲಿ ಖಾಲಿ ಇರುವ ಪ್ರ.ದ.ಸ/ರಾ.ನಿ ಹುದ್ದೆಗಳಿಗೆ ತಕ್ಷಣವೇ ಪದೊನ್ನತಿ ನೀಡಲು ಕ್ರಮವಹಿಸುವುದು.

ಅಂತರ್ ಜಿಲ್ಲಾ ಪತಿ–ಪತ್ನಿ ಪ್ರಕರಣಗಳ ವರ್ಗಾವಣೆಯ ಚಾಲನೆ ನೀಡಿ ಅಂತಿಮ ಆದೇಶಕ್ಕಾಗಿ ಬಾಕಿ ಇರುವ ಪ್ರಕರಣಗಳ ವರ್ಗಾವಣೆ ಆದೇಶ ನೀಡಬೇಕು.ಅಂತರ್ ಜಿಲ್ಲಾ ವರ್ಗಾವಣೆಯ ಕೆ.ಸಿ.ಎಸ್.ಆರ್ ನಿಯಮ 16ಎ ರ ಉಪಖಂಡ(2)ನ್ನು ಮರುಸ್ಥಾಪಿಸಬೇಕು.ಕೆಲವು ವಿಶೇಷ ಚೇತನ, ತೀವ್ರ ಅನಿವಾರ್ಯ ಹಾಗೂ ಆರೋಗ್ಯದ ಸಮಸ್ಯೆ ಇರುವ ಪ್ರಕರಣಗಳ ನಿಯೋಜನೆಗಳನ್ನು ಕೌನ್ಸಿಲಿಂಗ್ ಮೂಲಕ ನಿಯೋಜನೆ ಆದೇಶಗಳನ್ನು ಮಾಡುವಂತೆ ಸರ್ಕಾರವನ್ನು ಒತ್ತಾಯಿಸಲಾಯಿತು.

ಕೆಲಸದ ಅವಧಿಯ ಮುನ್ನ ಹಾಗೂ ಕೆಲಸದಮುಕ್ತಾಯದನಂತರನಡೆಸಲಾಗುವ ಎಲ್ಲಾ ಬಗೆಯ ವರ್ಚುವಲ್ ಸಭೆಗಳನ್ನು ಕಡ್ಡಾಯವಾಗಿ ನಿಷೇಧಿಸಬೇಕು.

ಕಂದಾಯ ಇಲಾಖೆಯ 3 ವರ್ಷಗಳ ಸೇವೆಯನ್ನು ಪರಿಗಣಿಸಿ ಅಂತರ್ ಜಿಲ್ಲಾ ವರ್ಗಾವಣೆಗಾಗಿ ಕಂದಾಯ ಇಲಾಖೆಯಲ್ಲಿ ಹೊಸ ಮಾರ್ಗಸೂಚಿಯನ್ನು ರಚಿಸಬೇಕು. ದಿನನಿತ್ಯ ಸಾರ್ವಜನಿಕ ವಲಯದಲ್ಲಿ ನೂರಾರು ಸೇವೆಗಳನ್ನು ನೀಡುವಾಗ ಮಾರಣಾಂತಿಕ ದೈಹಿಕ ಹಲ್ಲೆ, ಕೊಲೆ ಪ್ರಕರಣಗಳು ಈಗಾಗಲೇ ನಿರಂತರವಾಗಿ ನಡೆಯುತ್ತಿದ್ದು,

ಪುಟ 2

## ಗ್ರಾಮ ಆಡಳಿತಾಧಿಕಾರಿಗಳ ಸಮಸ್ಯೆಗೆ ಪರಿಹಾರ ನೀಡಿ

### ಹೊಸದುರ್ಗ ತಾಲೂಕು ಕಚೇರಿ ಎದುರು ಗ್ರಾಮ ಆಡಳಿತ ಅಧಿಕಾರಿಗಳಿಂದ ಧರಣಿ ಸತ್ಯಾಗ್ರಹ




» ಹೊಸದುರ್ಗ

ಗ್ರಾಮೀಣ ಭಾಗಗಳಲ್ಲಿ ನಿರಂತರ ಸೇವೆ ನಿರ್ವಹಿಸುವ ಗ್ರಾಮ ಆಡಳಿತ ಅಧಿಕಾರಿಗಳು ಹಲವಾರು ಸಮಸ್ಯೆ ಎದುರಿಸುತ್ತಿದ್ದು, ಕೆಲಸದ ಒತ್ತಡದಿಂದ ಅನಾರೋಗ್ಯಕ್ಕೆ ತುತ್ತಾಗುತ್ತಿದ್ದಾರೆ. ಸರ್ಕಾರದ ಒಟ್ಟು 17 ವೆಬ್ಸೈಟ್ ಗಳಲ್ಲಿ ಈ ಕಾರ್ಯನಿರ್ವಹಿಸುವ ಅನಿವಾರ್ಯತೆ ಉಂಟಾಗಿದೆ. ಕೂಡಲೇ, ಸರ್ಕಾರ ನಮ್ಮ ಸಮಸ್ಯೆಗೆ ಪರಿಹಾರ ಕ್ರಮ ಒದಗಿಸಬೇಕು. ಇಲ್ಲವಾದರೆ, ಬೆಂಗಳೂರಿನ ಫ್ರೀಡಂ ಪಾರ್ಕ್ ನಲ್ಲಿ ಧರಣಿ ಸತ್ಯಾಗ್ರಹ ನಡೆಸಲಾಗುವುದು ಎಂದು ಗುರುವಾರ ಧರಣಿ ನಿರತ ಗ್ರಾಮ ಆಡಳಿತಾಧಿಕಾರಿಗಳು ಹೇಳಿದರು. ಈ ಬಗ್ಗೆ ಪ್ರತಿಕ್ರಿಯಿಸಿ ಗ್ರಾಮ ಆಡಳಿತಾಧಿಕಾರಿಗಳ ಸಂಘದ ತಾಲೂಕು ಅಧ್ಯಕ್ಷ ಹರೀಶ್ ಮಾತನಾಡಿ, ಸರ್ಕಾರಕ್ಕೆ ಹಲವು ಬಾರಿ ಸೇವೆಯ ಬಗ್ಗೆ ಮನವಿ ಮಾಡಿದರೂ, ಸರ್ಕಾರ ಮಾತ್ರ ಯಾವುದೇ ಸೌಲಭ್ಯ ನೀಡದೆ ನಿರ್ಲಕ್ಷ್ಯ ವಹಿಸಿದೆ. ವಿಶೇಷವಾಗಿ ಗ್ರಾಮ ಆಡಳಿತ ಅಧಿಕಾರಿಗಳು ಹಲವು ರೀತಿಯ ಕಂದಾಯ ಇಲಾಖೆ ದಾಖಲಾತಿ ಸಿದ್ಧಪಡಿಸುವ ಅಧಿಕಾರ ಹೊಂದಿದ್ದಾರೆ. ಈ ಕೆಲಸ ನಿರ್ವಹಿಸದೆ ನೆಮ್ಮದಿಯಿಂದ ಬದುಕಲು ಸಾಧ್ಯವಾಗುತ್ತಿಲ್ಲ. ಪ್ರತಿನಿತ್ಯ ಒತ್ತಡದಿಂದ ಕಾರ್ಯನಿರ್ವಹಿಸುವ ಸ್ಥಿತಿ ನಿರ್ಮಾಣವಾಗಿದೆ.

ಪುಟ 2

## ಪ್ರಮುಖ ಸುದ್ದಿ

### ಗ್ರಾಮಗಳಿಗೆ ಸರ್ವಿಸ್ ರಸ್ತೆ ನಿರ್ಮಿಸದೆ ನಿರ್ಲಕ್ಷ್ಯ: ಗ್ರಾಮಸ್ಥರಿಂದ ಪ್ರತಿಭಟನೆ: ಶಾಸಕ ರಘುಮೂರ್ತಿ ವೀಕ್ಷಣೆ

# ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಅವೈಜ್ಞಾನಿಕ ಕಾಮಗಾರಿ

» ಚಳ್ಳಕೆರೆ

ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ ಶ್ರೀರಂಗಪಟ್ಟಣ–ಬೀದರ್ ರಾಷ್ಟ್ರೀಯ ಹೆದ್ದಾರಿ(150ಎ) ನಿರ್ಮಾಣವನ್ನು ಪೂರೈಸಿ ಕಳೆದ 23 ಸೋಮವಾರ ಹಿರಿಯೂರು ಮೂಲಕ ಬಳ್ಳಾರಿಗೆ ಹೋಗುವ ವಾಹನಗಳಿಗೆ ಸಿದ್ದಾಪುರ ಗೇಟ್‌ಗಳಿ ಬೈಪಾಸ್ ರಸ್ತೆ ಮೂಲಕ ವಾಹನ ಓಡಾಟಕ್ಕೆ ಅನುವು ಮಾಡಿಕೊಟ್ಟಿತ್ತು.

ಈ ಬಗ್ಗೆ ಮಾಹಿತಿ ಪಡೆದ ಸುತ್ತಮುತ್ತಲ ಗ್ರಾಮಸ್ಥರು ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ ಗ್ರಾಮಗಳಿಗೆ ಹೈವೇಯಿಂದ ಸಂಪರ್ಕ ರಸ್ತೆ ನಿರ್ಮಿಸದೆ ಸಾರ್ವಜನಿಕರು ಹಾಗೂ ವಾಹನಗಳ ಓಡಾಟಕ್ಕೆ ತೊಂದರೆ ಉಂಟು ಮಾಡಿಲ್ಲದೆ, ರಾಷ್ಟ್ರೀಯ ಹೆದ್ದಾರಿ ಹಾದುಹೋಗಿರುವ ಮಾರ್ಗದೂದಕ್ಕೂ ಯಾವುದೇ ಅಪಾಯ ಸೂಚಿಸುವ ನಾಮಫಲಕಗಳನ್ನು ಅಳವಡಿಸಿದೆ ನಿರ್ಲಕ್ಷ್ಯ ತೋರಿದ್ದಾರೆ. ಗ್ರಾಮೀಣ ಭಾಗದಿಂದ ಬರುವ ಜನರು ಹೆದ್ದಾರಿಗೆ ಕಾಲಿಡುತ್ತಲೆ ಪ್ರಾಣಕ್ಕೆ ಸಂಚಕಾರ ಗ್ಯಾರಂಟಿ ಎಂದು ಆರೋಪಿಸಿ ಪ್ರಾಧಿಕಾರದ ವಿರುದ್ಧ ವಾಹನಗಳನ್ನು ತಡೆದು ಪ್ರತಿಭಟನೆ ನಡೆಸಿದರು.





ಹಿರಿಯೂರಿನಿಂದ ಬರುವ ವಾಹನಗಳು ಸಿದ್ದಾಪುರ ಬಳಿ ಬೈಪಾಸ್ ರಸ್ತೆಯನ್ನು ಬಳಸಲು ಅವಕಾಶ ಮಾಡಿದೆ, ಆದರೆ ಈ ಗ್ರಾಮದಸಂಪರ್ಕರಸ್ತೆನಿರ್ಮಿಸದೆನಿರ್ಲಕ್ಷ್ಯ ತೋರಿದೆ. ಈ ಬಗ್ಗೆ ಆಕ್ರೋಶಗೊಂಡ ಗ್ರಾಮಸ್ಥರು ಹೆದ್ದಾರಿಯಲ್ಲೇ ಕುಳಿತು ಪ್ರತಿಭಟನೆ ನಡೆಸಿದರು.

ನರಹರಿ ನಗರದ ಹಿಂಭಾಗದ ರೈಲ್ವೆ ಮಾರ್ಗಕ್ಕೆ ಯಾವುದೇ ಸೂಕ್ತ ರಸ್ತೆಯನ್ನು ಮಾಡದೆ ಇರುವುದ ಅಲ್ಲಿನ ಗ್ರಾಮಸ್ಥರಿಗೆ ತೊಂದರೆಯಾಗಿದೆ. ವೀರದಿಮ್ಮನಹಳ್ಳಿ ಗ್ರಾಮಕ್ಕೂ ಸಹ ಸಂಪರ್ಕ ರಸ್ತೆಯನ್ನು ನಿರ್ಮಿಸು ಏಕ ರಾಷ್ಟ್ರೀಯ ಹೆದ್ದಾರಿ ನಿರ್ಮಾಣವಾಗಿದ್ದು, ಇದರಿಂದ ಗ್ರಾಮದಿಂದ ಬರುವ ವಾಹನಗಳು, ಸಾರ್ವಜನಿಕರು ರಾಷ್ಟ್ರೀಯ ಹೆದ್ದಾರಿಯನ್ನು ದಾಟಿಹೋಗಬೇಕಿದೆ. ಆದರೆ, ಇಲ್ಲಿ ಯಾವುದೇ ರಕ್ಷಣಾ ವ್ಯವಸ್ಥೆ ಮಾಡಿಲ್ಲ, ಇದರಿಂದ ಸಾರ್ವಜನಿಕರು ಕೈಯಲ್ಲಿ ಪ್ರಾಣಹಿಡಿದು ರಸ್ತೆ ದಾಟಬೇಕಿದೆ. ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಅವೈಜ್ಞಾನಿಕ ನಡೆಗೆ ಬೇಸರ ವ್ಯಕ್ತಪಡಿಸಿದ ಗ್ರಾಮಸ್ಥರು ಪ್ರತಿಭಟನೆ ನಡೆಸಿದರು.

ಸುದ್ದಿ ತಿಳಿದ ಕ್ಷೇತ್ರ ಶಾಸಕ, ಸಣ್ಣಕೈಗಾರಿಕೆ ಅಭಿವೃದ್ಧಿಮಂಡಳಿ ಅಧ್ಯಕ್ಷ ಟಿ.ರಘುಮೂರ್ತಿ, ಜಿಲ್ಲಾಧಿಕಾರಿ ಟಿ.ವೆಂಕಟೇಶ್, ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರಿಗಳ ಅಧಿಕಾರಿಗಳು, ಲೋಕೋಪಯೋಗಿ ಇಲಾಖೆ, ತಾಲ್ಲೂಕು ಅಧಿಕಾರಿಗಳತಂಡದೊಂದಿಗೆಸ್ಥಳಕ್ಕೆದಾವಿಸಿ ಮುಷ್ಕರ ನಿರತ ಗ್ರಾಮಸ್ಥರೊಂದಿಗೆ ಚರ್ಚೆ ನಡೆಸಿದರು. ಈ ಸಂದರ್ಭದಲ್ಲಿ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ ಮುಂದಾಲೋಚನೆ ಇಲ್ಲದೆ ಗ್ರಾಮಗಳಿಗೆ ಸಂಪರ್ಕವನ್ನು ರಸ್ತೆ ನಿರ್ಮಿಸದೇ ಇರುವುದು ಕಂಡುಬಂತು. ಕೂಡಲೇ ಅಧಿಕಾರಿಗಳಿಗೆ ಸೂಚನೆ ನೀಡಿದ ಶಾಸಕರು, ಸಿದ್ದಾಪುರ, ವೀರದಿಮ್ಮನಹಳ್ಳಿ, ಸಾಣಿಕೆರೆ ಮುಂತಾದ ಗ್ರಾಮಗಳ ಸಂಪರ್ಕ ರಸ್ತೆಯನ್ನು ನಿರ್ಮಿಸುವಂತೆ ನಿರ್ದೇಶನ ನೀಡಿದರು. ಶಾಸಕರ ಭರವಸೆ ಮೇರೆಗೆ ಮುಷ್ಕರವನ್ನುವಾಪಾಸ್‌ಪಡೆಯಲಾಯಿತು. ಜಿಲ್ಲಾಧಿಕಾರಿ ಜಿ.ವೆಂಕಟೇಶ್, ಜಿಲ್ಲಾ ರಕ್ಷಣಾಧಿಕಾರಿ ರಂಜಿತ್‌ಕುಮಾರ್ ಬಂಡಾರು, ಲೋಕೋಪಯೋಗಿ ಇಲಾಖೆ ಅಧಿಕಾರಿ ವಿಜಯಭಾಸ್ಕರ್, ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಅಧಿಕಾರಿಗಳಾಧ ದಿವ್ಯನಾಥ, ಪ್ರವೀನ್, ಜೀಲಾನ್, ತಹಶೀಲ್ದಾರ್ ರೇಹಾನ್‌ಪಾಷ, ಗ್ರಾಮಸ್ಥರಾದ ಜಗದೀಶ್‌ನಾಯ್ಕ, ಸುನೀಲ್‌ಕುಮಾರ್, ಕುಮಾರ್‌ನಾಯ್ಕ, ಅಶೋಕ್‌ನಾಯ್ಕ,ಸಿದ್ದಾಪುರಮಂಜುನಾಥ ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ಗ್ರಾಮಾಡಳಿತಾಧಿಕಾರಿಗಳ ಸಮಸ್ಯೆಗೆ ಪರಿಹಾರ ನೀಡಿ

» ಮೊದಲ ಪುಟದಿಂದ

ಇದನ್ನು ವಿರೋಧಿಸಿ ಪ್ರತಿಭಟನೆ ನಡೆಸಲಾಗುತ್ತಿದೆ ಎಂದರು. ಹೊಸದುರ್ಗ ತಾಲೂಕಿನಲ್ಲಿ ಒಟ್ಟು 35 ಗ್ರಾಮ ಆಡಳಿತ ಅಧಿಕಾರಿಗಳು ಕಾರ್ಯನಿರ್ವಹಿಸುತ್ತಿದ್ದು, ಸರ್ಕಾರದ ಹಲವಾರು ಯೋಜನೆ ಮತ್ತು ಸೌಲಭ್ಯವನ್ನು ಜನರಿಗೆ ತಲುಪಿಸುವ ಕಾರ್ಯ ಮಾಡಲಾಗುತ್ತಿದೆ. ಪ್ರತಿಯೊಂದು ಹಂತದಲ್ಲೂ ಸಮಸ್ಯೆಗಳನ್ನು ಎದುರಿಸಿ ಹೋರಾಡುವ ಸ್ಥಿತಿ ಉಂಟಾಗಿದೆ. ಸರ್ಕಾರ ಮಾತ್ರ ಯಾವುದೇ ಸೌಲಭ್ಯ ನೀಡದೆ ಗ್ರಾಮ ಆಡಳಿತ ಅಧಿಕಾರಿಗಳಿಂದ ಹೆಚ್ಚು ಸೇವೆ ನಿರೀಕ್ಷೆ ಮಾಡುತ್ತಿದೆ. ರಾಜ್ಯ ಸಂಘದ ಸೂಚನೆಯ ಮೇರೆಗೆ ತಾಲೂಕು ಮಟ್ಟದಲ್ಲಿ ಧರಣಿ ಸತ್ಯಾಗ್ರಹ ಮಾಡುತ್ತಿದ್ದು, ಸರ್ಕಾರದ ನಿರ್ಧಾರವನ್ನು ಗಮನಿಸಿ, ನಮ್ಮ ಮುಂದಿನ ನಿರ್ಧಾರವನ್ನು ತೆಗೆದುಕೊಳ್ಳುತ್ತೇವೆ ಎಂದು ಹೇಳಿದರು. ಈ ವೇಳೆ ತಾಲೂಕು ಗ್ರಾಮ ಆಡಳಿತಾಧಿಕಾರಿಗಳ ಸಂಘದ ಉಪಾಧ್ಯಕ್ಷರು, ಕಾರ್ಯದರ್ಶಿ ಮತ್ತು ಸಂಘದ ಸದಸ್ಯರಿದ್ದರು.

### ರಾಜ್ಯಾದ್ಯಾದಂತ್ಯ ಕೆಲಸ ಬಹಿಷ್ಕರಿಸಿ ಬೇಡಿಕೆಗಳ ಈಡೇರಿಕೆಗೆ ಒತ್ತಾಯ

» ಮೊದಲ ಪುಟದಿಂದ

ಅರಣ್ಯ ಇಲಾಖೆ ಹಾಗೂ ಪೋಲಿಸ್ ಇಲಾಖೆಯಲ್ಲಿರುವಂತೆ 3000/– ರೂಗಳನ್ನು ಆಪತ್ತಿನ ಭತ್ಯೆ ಪ್ರಯಾಣ ಭತ್ಯೆ ದರವನ್ನು 500/– ರೂಗಳಿಂದ 3000/– ರೂಗಳಿಗೆ ಹೆಚ್ಚುವರಿ ಮಾಡಬೇಕು.ಮನೆ ಹಾನಿ ಪ್ರಕರಣಗಳ ಜವಾಬ್ದಾರಿಯಿಂದಗ್ರಾಮಆಡಳಿತಅಧಿಕಾರಿಗಳನ್ನು ಕೈಬಿಡುವಂತೆ ಆಗ್ರಹಿಸಲಾಯಿತು.ದತ್ತರ್ ಹಾಗೂ ಜಮಾಬಂದಿಯನ್ನು ರದ್ದುಪಡಿಸಬೇಕು, ಅನ್ಯ ಇಲಾಖೆಯ ಕೆಲಸ ನಿರ್ವಹಿಸದಂತೆ ಸೂಕ್ತ ಆದೇಶ ನೀಡುಬೇಕು,ಹಾಲಿ ಇರುವ ಬ್ಯಾಂಕಿಂಗ್ ವ್ಯವಸ್ಥೆಯನ್ನು ರದ್ದುಪಡಿಸಬೇಕು ಮ್ಯುಟೇಷನ್ ಅವಧಿ ದಿನವನ್ನು ವಿಸ್ತರಣೆ ಮಾಡಬೇಕು ರಾಜ್ಯದ ಗ್ರಾಮ ಸಹಾಯಕರಿಗೆ ಸೇವಾಭದ್ರತೆಯನ್ನು ಒದಗಿಸುವಂತೆ ಒತ್ತಾಯಿಸಲಾಯಿತು. ಈ ಸಂದರ್ಭದಲ್ಲಿ ಗೌರವಾಧ್ಯಕ್ಷರಾದ ಪಾಂಡುರಂಗಪ್ಪ, ಕಂದಾಯ ನೌಕರರ ಸಂಘದ ಜಿಲ್ಲಾಧ್ಯಕ್ಷರಾದ ಸಿದ್ದೇಶ್, ತಾಲ್ಲೂಕು ಅಧ್ಯಕ್ಷ ಸಂಪತ್ ಕುಮಾರ್, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಮಹಮದ್ ಇರ್ಫಾನ್, ಉಪಾಧ್ಯಕ್ಷರಾದ ಶಿವಕುಮಾರ್, ಪ್ರಧಾನ ಕಾರ್ಯದರ್ಶಿ ರಾಘವೇಂದ್ರ ವಡೇರ್ ಖಂಜಾಚಿ ಸುರೇಶ್ ಸೇರಿದಂತೆ ಗ್ರಾಮ ಆಡಳಿತ ಅಧಿಕಾರಿಗಳು ಧರಣಿಯಲ್ಲಿ ಭಾಗವಹಿಸಿದ್ದರು.

### ಅ.27 ರಂದು ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ ಅಧ್ಯಕ್ಷರ ಭೇಟಿ

» ಚಿತ್ರದುರ್ಗ

ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಅಧ್ಯಕ್ಷರಾದ ಕೆ.ನಾಗಣ್ಣಗೌಡ ಅವರು ಇದೇ ಸೆ.27ರಂದು ಚಿತ್ರದುರ್ಗ ನಗರಕ್ಕೆ ಭೇಟಿ ನೀಡುವರು. ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಅಧ್ಯಕ್ಷರು ಸೆ.27ರಂದು ಮಧ್ಯಾಹ್ನ 12.30ಕ್ಕೆ ಚಿತ್ರದುರ್ಗ ನಗರದ ಜಿಲ್ಲಾ ಆಸ್ಪತ್ರೆ ಮತ್ತು ಕ್ರೈಸ್ ವ್ಯಾಪ್ತಿಗೆ ಒಳಪಡುವ ವಸತಿ ನಿಲಯಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸುವರು ಎಂದು ಜಿಲ್ಲಾ ಮಕ್ಕಳ ಘಟಕ ಮಕ್ಕಳ ರಕ್ಷಣಾಧಿಕಾರಿ ಸಿ.ಸವಿತಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಎನ್‌ಪಿಎಸ್ ನೌಕರರ ಸಂಘದ ವತಿಯಿಂದ ಓಪಿಎಸ್ ಜಾರಿಗೊಳಿಸುವಂತೆ ಒತ್ತಾಯಿಸಿ ಮುಖ್ಯ ಕಾರ್ಯದರ್ಶಿಗೆ ಮನವಿ.

ಚಳ್ಳಕೆರೆ–26 ತಾಲ್ಲೂಕು ಸರ್ಕಾರಿ ಎನ್‌ಪಿಎಸ್ ನೌಕರರ ಸಂಘದ ವತಿಯಿಂದ ಎನ್‌ಪಿಎಸ್ ರದ್ದು ಮಾಡಿ ಒಪಿಎಸ್‌ನ್ನು ಕೂಡಲೇ ಜಾರಿಗೊಳಿಸಬೇಕೆಂದು ಒತ್ತಾಯಿಸಿ ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿಯವರಿಗೆ ಲಿಖಿತ ಮೂಲಕ ಮನವಿಯನ್ನು ಸಲ್ಲಿಸಲಾಗಿದೆ ಎಂದು ತಾಲ್ಲೂಕು ಎನ್‌ಪಿಎಸ್ ನೌಕರರ ಸಂಘದ ಅಧ್ಯಕ್ಷ ಎಚ್.ಒ.ರಾಜಣ್ಣ ತಿಳಿಸಿದರು.
ಅವರು, ತಾಲ್ಲೂಕು ಕಚೇರಿ ಮುಂಭಾಗದಲ್ಲಿ ರಾಜ್ಯ ಸಂಘದ ಸೂಚನೆಯಂತೆ ಪದಾಧಿಕಾರಿಗಳೊಂದಿಗೆ ಕಪ್ಪುಪಟ್ಟಿಧರಿಸಿ ಓಪಿಎಸ್‌ನ್ನು ಕೂಡಲೇ ಜಾರಿಗೊಳಿಸಬೇಕೆಂದು ಒತ್ತಾಯಿಸಿ ಮನವಿ ನೀಡಿದರು. ಪ್ರಸ್ತುತ ರಾಜ್ಯ ಸರ್ಕಾರಿ ನೌಕರರಿಗೆ ಓಪಿಎಸ್ ಜಾರಿ ಮಾಡಿದರೆ ಮಾತ್ರ ಹೆಚ್ಚಿನ ಜೀವನ ಭದ್ರತೆ ಹಾಗೂ ಇತರೆ ಸೌಲಭ್ಯಗಳು ದೊರಕುತ್ತವೆ. ಈ ನಿಟ್ಟಿನಲ್ಲಿ ಸರ್ಕಾರ ಗಂಭೀರ ಚಿಂತನೆ ನಡೆಸಬೇಕು ಎಂದರು.
ಸರ್ಕಾರಿ ನೌಕರರ ಸಂಘದ ರಾಜ್ಯ ಸಂಘಟನಾ ಕಾರ್ಯದರ್ಶಿ ಸಿ.ಟಿ.ವೀರೇಶ್ ಮಾತನಾಡಿ, ಕಳೆದ ಸುಮಾರು ಎರಡು ವರ್ಷಗಳಿಂದ ನಿರಂತರವಾಗಿ ರಾಜ್ಯ ಸರ್ಕಾರಕ್ಕೆ ಎನ್‌ಪಿಎಸ್ ನೌಕರರ ಸಂಘದ ವತಿಯಿಂದ ಓಪಿಎಸ್ ಜಾರಿಗೊಳಿಸುವಂತೆ ಒತ್ತಾಯಿಸಿ ಮನವಿ ನೀಡಲಾಗುತ್ತಿದೆ. ಆದರೆ, ಸರ್ಕಾರ ಮಾತ್ರ ಈ ಬಗ್ಗೆ ಸಕರಾತ್ಮಕ ನಿರ್ಧಾರ

ಕೆರೆ ಒತ್ತುವರಿ ತೆರವುಗೊಳಿಸಲು ವಿಫಲರಾದ ಅಧಿಕಾರಿಗಳ ವಿರುದ್ಧ ಪ್ರಕರಣ ದಾಖಲು: ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಎಚ್ಚರಿಕೆ

# ಬಾಕಿ ಕೆರೆ ಸರ್ವೆ ಪೂರ್ಣಗೊಳಿಸಲು ಗಡುವು

» ಚಿತ್ರದುರ್ಗ



ಭೂ ಕಬಳಿಕೆ ನಿಷೇಧ ಕಾಯ್ದೆ 192(ಎ) ಅನುಸಾರ ಕೆರೆಗಳ ಒತ್ತುವರಿ ತೆರವುಗೊಳಿಸುವುದು ಸಂಬಂದ ಪಟ್ಟ ಅಧಿಕಾರಿಗಳ ಕರ್ತವ್ಯವಾಗಿದೆ. ಒತ್ತುವರಿ ತೆರವುಗೊಳಿಸಲುವಿಫಲರಾದಅಧಿಕಾರಿಗಳ ವಿರುದ್ದ ಯಾವುದೇ ಮುಲಾಜು ತೋರದೆ 192(ಬಿ) ಅಡಿ ಪ್ರಕರಣ ದಾಲಿಸುವುದಾಗಿ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಎಚ್ಚರಿಕೆ ನೀಡಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಬುಧವಾರ ಕರ್ನಾಟಕ ಕೆರೆ ಸಂರಕ್ಷಣೆ ಮತ್ತು ಅಭಿವೃದ್ಧಿ ಪ್ರಾಧಿಕಾರದ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಬೃಹತ್ ನೀರಾವರಿ, ಸಣ್ಣ ನೀರಾವರಿ, ಪಂಚಾಯತ್ ಇಂಜಿನಿಯರಿಂಗ್,ಗ್ರಾ.ಪಂ. ಸೇರಿದಂತೆ ಇತರೆ ಸ್ಥಳೀಯ ಸಂಸ್ಥೆಗಳು ತಮ್ಮ ವ್ಯಾಪ್ತಿಯಲ್ಲಿ ಬರುವ ಜಲಮೂಲಗಳನ್ನು ವೈಜ್ಞಾನಿಕವಾಗಿ ಗುರುತಿಸಬೇಕು. ಹೀಗೆ ಗುರುತಿಸಿದ ಜಲಮೂಲಗಳ ಸರ್ವೇ ಕಾರ್ಯವನ್ನು ಇಲಾಖಾವಾರು ಕೈಗೊಂಡು, ಒತುವರಿ ಕಂಡುಬಂದರೆ ತಕ್ಷಣವೇ ತೆರವಿಗೆ ಮುಂದಾಗಬೇಕು. ಯಾವುದೇ ಕಾರಣಕ್ಕೂ ಸುಪ್ರಿಂ ಕೋರ್ಟ್ ಹಾಗೂ ಹಸಿರು ನ್ಯಾಯಾಧೀಕರಣ ನೀಡಿರುವ ತೀರ್ಪುಗಳನ್ನು ಉಲಂಘಿಸಿ, ಕೆರೆ ಹಾಗೂ ಜಲಮೂಲಗಳ ಬಫರ್ ಜೋನ್ ಪ್ರದೇಶದಲ್ಲಿ ಶಾಶ್ವತ ನಿರ್ಮಾಣ ಕಾರ್ಯಗಳಿಗೆ ಅನುಮತಿ ನೀಡಬಾರದು ಎಂದರು.ಜಿಲ್ಲೆಯಲ್ಲಿ 437 ಜಲಮೂಲಗಳನ್ನು ಗುರುತಿಸಲಾಗಿದೆ. ಇದರಲ್ಲಿ ಸಣ್ಣ ನೀರಾವರಿ ಇಲಾಖೆಯಡಿ 166 ಕೆರೆಗಳಿವೆ. ಈ ಪೈಕಿ 2 ಕೆರೆಗಳ ಸರ್ವೆ ಕಾರ್ಯ ಬಾಕಿ ಇದೆ. ಸರ್ವೆ ನಡೆಸಿದ ಕೆರೆಗಳ ಪೈಕಿ 75 ಕೆರೆಗಳಲ್ಲಿ ಒತ್ತುವರಿ ಗುರುತಿಸಲಾಗಿದ್ದು, 64 ಕೆರೆಗಳ ಒತ್ತುವರಿ ತೆರವು ಗೊಳಿಸಲಾಗಿದೆ. 11 ಕೆರೆಗಳ ಒತ್ತುವರಿ ಬಾಕಿಯಿದೆ. ಪಂಚಾಯತ್ ಇಂಜಿನಿಯರಿಂಗ್ ಹಾಗೂ ಗ್ರಾಮ ಪಂಚಾಯಿತಿಗಳ ಅಡಿ 269 ಕೆರೆಗಳಿದ್ದು, 134 ಕೆರೆಗಳ ಸರ್ವೆ ಪೂರ್ಣಗೊಳಿಸಲಾಗಿದೆ. 135 ಕೆರೆಗಳ ಸರ್ವೆ ಕಾರ್ಯ ಬಾಕಿಯಿದೆ. 29 ಕೆರೆಗಳಲ್ಲಿ ಒತ್ತುವರಿ ಗುರುತಿಸಲಾಗಿದ್ದು, 10 ಕೆರೆಗಳ ಒತ್ತುವರಿ ತೆರವುಗೊಳಿಸಲಾಗಿದೆ. 19 ಕೆರೆಗಳ ಒತ್ತುವರಿ ತೆರವು ಬಾಕಿಯಿದೆ. ಬೃಹತ್ ನೀರಾವರಿ ಇಲಾಖೆ ವ್ಯಾಪ್ತಿಯಲ್ಲಿ 2 ಕೆರೆಗಳಿವೆ ಎಂದು ಅಧಿಕಾರಿಗಳು ಸಭೆಯಲ್ಲಿ ಮಾಹಿತಿ ನೀಡಿದರು.

ಸೋಮವಾರದಿಂದಲೇ ಕೆರೆಗಳ ಸರ್ವೆ ಕಾರ್ಯ ಆರಂಭಿಸಬೇಕು. ಸರ್ವೆ ಕೈಗೊಳ್ಳುವ ಕೆರೆಗಳ ಮಾಹಿತಿಯನ್ನು ಭೂ ದಾಖಲೆಗಳ ಉಪನಿರ್ದೇಶಕರಿಗೆ ನೀಡಿ, ದಿನಾಂಕ ಗೊತ್ತುಪಡಿಸಿ, ತಹಶೀಲ್ದಾರ್‌ಗಳ ನೇತೃತ್ವದಲ್ಲಿ ಸಂಬಂಧ ಪಟ್ಟ ಅಧಿಕಾರಿಗಳು ಸ್ಥಳದಲ್ಲಿದ್ದು, ಸರ್ವೆ ಕಾರ್ಯ ಪೂರ್ಣಗೊಳಿಸಬೇಕು. 3 ತಿಂಗಳ ಒಳಗೆ ಜಿಲ್ಲೆಯ ಎಲ್ಲಾ ಕೆರೆಗಳ ಸರ್ವೆಪೂರ್ಣಗೊಳಿಸುವಂತೆ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಅಧಿಕಾರಿಗಳಿಗೆ ಗಡುವು ನೀಡಿದರು.

ಸರ್ವೆ ಕಾರ್ಯ ಪೂರ್ಣಗೊಂಡು ಸರಹದ್ದು ಗುರುತಿಸಿದ ಕೆರೆಗಳ ಸುತ್ತಲೂ ಸಂಬಂಧ ಪಟ್ಟ ಅಧಿಕಾರಿಗಳು ಟ್ರೆಂಚ್ ಹೊಡಿಸಬೇಕು. ಕಲ್ಲುಗಂಬಗಳನ್ನು ನೆಟ್ಟು ಬೇಲಿ ಅಳವಡಿಸಬೇಕು. ಜೊತೆಗೆ ಸಾಮಾಜಿಕ ಅರಣ್ಯ ವಿಭಾಗದಿಂದ ಸಸಿಗಳನ್ನು ಪಡೆದು ಬಯೋ ಫೆನ್ಸಿಂಗ್ ಅಳವಡಿಸುವಂತೆ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಅಧಿಕಾರಿಗಳಿಗೆ ಸೂಚನೆ ನೀಡಿದರು.ಮನರೇಗಾದಡಿ ಗ್ರಾಮ ಪಂಚಾಯಿತಿಗಳಲ್ಲಿ ಕೆರೆಗಳ ಸುತ್ತಲೂ ಗಿಡಗಳನ್ನು ಬೆಳೆಸಲು ಯೋಜನೆ ರೂಪಿಸಬೇಕು. ಸರಹದ್ದು ಗುರುತಿಸಿದ ನಂತರ, ಕೆರೆಗಳನ್ನು ಒತ್ತುವರಿ ಮಾಡಿ ಉಳಿಮೆ ಹಾಗೂ ಇತರೆ ಚಟುವಟಿಕೆ ಕೈಗಳ್ಳುತ್ತಿರುವವರನ್ನು ಅಲ್ಲಿಂದ ತೆರವುಗೊಳಿಸಬೇಕು. ತೆರವಿನ ವೇಳೆ ಯಾವುದೇ ಕಾನೂನು ಸುವ್ಯವಸ್ಥೆಗೆ ತೊಡಕು ಕಂಡುಬಂದರೆ ಸಂಬಂಧ ಪಟ್ಟ ತಹಶೀಲ್ದಾರ್ ಹಾಗೂ ಪೊಲೀಸ್ ಇಲಾಖೆಯಿಂದ ರಕ್ಷಣೆ ಪಡೆದುಕೊಳ್ಳುವಂತೆ ಜಿಲ್ಲಾಧಿಕಾರಿ ಟಿ.ವೆಂಕಟೇಶ್‌ತಿಳಿಸಿದರು.

ಎಲ್ಲತಾಲ್ಲೂಕುಗಳತಹಶೀಲ್ದಾರರುತಮ್ಮ ಅಧ್ಯಕ್ಷತೆಯಲ್ಲಿ ವಾರದೊಳಗೆ ತಾಲ್ಲೂಕು ಕೆರೆ ಸಂರಕ್ಷಣ ಸಮಿತಿ ಸಭೆ ನಡೆಸುವಂತೆ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಸಭೆಯಲ್ಲಿ ನಿರ್ದೇಶನ ನೀಡಿದರು.

ಉಪವಿಭಾಗಧಿಕಾರಿಗಳ ನೇತೃತ್ವದಲ್ಲಿ 15 ದಿನಗಳ ಒಳಗೆ ಜಿಲ್ಲೆಯ ಎಲ್ಲ ಜಲಮೂಲ ಹಾಗೂ ಕೆರೆಗಳ ಆಕಾರ್‌ಬಂದ್ ಕಾರ್ಯ ಕೈಗೊಂಡು, ಇದರ ಪ್ರಕಾರ ಸರ್ವೆ ನಂಬರ್, ಆರ್.ಟಿ.ಸಿ ಮಾಡಬೇಕು. ಜಲಮೂಲಗಳ ಹಾಗೂ ಬಫರ್ ಜೋನ್ ಪ್ರದೇಶವನ್ನು ಸ್ಪಷ್ಟವಾಗಿ ಬಣ್ಣದಿಂದ ಗುರುತಿಸಿ ನಕ್ಷೆಯಲ್ಲಿ ಸಿದ್ದಪಡಿಸುವಂತೆ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಹೇಳಿದರು.

ಚಿತ್ರದುರ್ಗ ನಗರದ ಮಠದ ಕುರುಬರಹಟ್ಟಿ, ಹಿರಿಯೂರಿನ ಯರದಕಟ್ಟೆ, ಚಳ್ಳಕೆರೆ ನಗರಂಗೆರೆ, ಹೊಳಲ್ಕೆರೆ ಪಟ್ಟಣದ ಹೆಸರಗಟ್ಟೆ (ಶಿವನ ಕೆರೆ) ಕೆರೆಗಳನ್ನು ನಿಯಮಾನುಸಾರ ನಗರ ಸಭೆ ಹಾಗೂ ಪಟ್ಟಣ ಪಂಚಾಯಿತಿಗಳಿಗೆ ಹಸ್ತಾಂತರಿಸಬೇಕು. ಸರ್ಕಾರ ಹಾಗೂ ನಗರಭಿವೃದ್ಧಿ ಪ್ರಾಧಿಕಾರಗಳ ಅನುದಾದಡಿ ಈ ಕೆರೆಗಳ ಸೌಂದರ್ಯಿಕರಣ, ಕೆರೆ ಆವಾಸದ ಸಂರಕ್ಷಣೆಗೆ ಯೋಜನೆ ರೂಪಿಸುವಂತೆ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಮಠದ ಕುರುಬರಹಟ್ಟಿ ಕೆರೆಯ ಅಭಿವೃದ್ಧಿಗೆ ರೂ.5 ಕೋಟಿ ವೆಚ್ಚದಲ್ಲಿ ಯೋಜನೆ ರೂಪಿಸಿರುವುದಾಗಿ ಅಧಿಕಾರಿಗಳು ಸಭೆಯಲ್ಲಿ ಮಾಹಿತಿ ನೀಡಿದರು. ಸಭೆಯಲ್ಲಿ ಕೆರೆ ಸಂರಕ್ಷಣೆ ಮತ್ತು ಅಭಿವೃದ್ಧಿ ಪ್ರಾಧಿಕಾರಕ್ಕೆ ಸಲ್ಲಿಕೆಯಾದ ದೂರುಗಳ ಕುರಿತು ಚರ್ಚಿಸಲಾಯಿತು. ಸಭೆಗೆ ಗೈರು ಹಾಜರಾದ ಅಧಿಕಾರಿಗಳಿಗೆ ಶೋಕಾಸ್ ನೋಟಿಸು ನೀಡುವಂತೆ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಹೇಳಿದರು.

ಜಿಲ್ಲಾ ಕಾನೂನು ಸೇವಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶ ಎಂ.ವಿಜಯ್, ಉಪವಿಭಾಗಧಿಕಾರಿ ಎಂ.ಕಾರ್ತಿಕ್, ಕೆರೆ ಸಂರಕ್ಷಣೆ ಮತ್ತು ಅಭಿವೃದ್ಧಿ ಪ್ರಾಧಿಕಾರದ ಮಲ್ಲಿಕಾರ್ಜುನ್, ಭೂಧಾಖಲೆಗಳ ಉಪನಿರ್ದೇಶಕ ರಾಮಾಂಜಿನೇಯ, ನಗರಾಭಿವೃದ್ಧಿ ಪ್ರಾಧಿಕಾರದ ಯೋಜನಾ ನಿರ್ದೇಶಕ ಮಹೇಂದ್ರಕುಮಾರ್, ತಹಶೀಲ್ದಾರುಗಳಾದ ಡಾ.ನಾಗವೇಣಿ, ರೆಹಮಾನ್ ಪಾಷ, ತಿರುಪತಿ ಪಾಟೀಲ್, ಫಾತೀಮಾ.ಬಿ.ಬಿ ಸೇರಿದಂತೆ ಇತರೆ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

## ಹಸಿರು ನಗರವಾಗಿಸಲು ಪಾಲಿಕೆ ವ್ಯಾಪ್ತಿಯಲ್ಲಿ ವರ್ಷಕ್ಕೆ ಲಕ್ಷ ಸಸಿ ನೆಡುವ ಗುರಿ; ಜಿಲ್ಲಾಧಿಕಾರಿ ಗಂಗಾಧರಸ್ವಾಮಿ

» ದಾವಣಗೆರೆ




ದಾವಣಗೆರೆ ಸ್ಮಾರ್ಟ್‌ಸಿಟಿಯಾಗಿದ್ದು ಇದನ್ನು ಹಸಿರು ನಗರವಾಗಿಸಲು ಪ್ರತಿ ವರ್ಷ ವಿವಿಧ ಜಾತಿಯ ಲಕ್ಷ ಗಿಡಗಳನ್ನು ಬೆಳೆಸಲು ಉದ್ದೇಶಿಸಲಾಗಿದೆ ಎಂದು ಜಿಲ್ಲಾಧಿಕಾರಿ ಜಿ.ಎಂ. ಗಂಗಾಧರಸ್ವಾಮಿ ತಿಳಿಸಿದರು.

ನಗರದ ಶಿವ ಪಾರ್ವತಿ ಬಡಾವಣೆ, ಜೆ.ಹೆಚ್. ಪಟೇಲ್ ಬಡಾವಣೆ ಹಾಗೂ ಬನಶಂಕರಿ ಬಡಾವಣೆಯಲ್ಲಿ ಜಿಲ್ಲಾ ಉಸ್ತುವಾರಿ ಸಚಿವರ ಜನ್ಮ ದಿನಾಚರಣೆ ಅಂಗವಾಗಿ ಅರಣ್ಯ ಇಲಾಖೆಯಿಂದ ಏರ್ಪಡಿಸಲಾದ ಸಸಿ ನಡೆಯುವ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

ಉತ್ತಮ ಆರೋಗ್ಯಕ್ಕೆ ಶುದ್ದ ಗಾಳಿ ಸಿಗಬೇಕು, ಹಸಿರು ನಗರವಾಗಿ ಪರಿವರ್ತನೆಯಾಗಬೇಕೆಂದು ನಗರ ವ್ಯಾಪ್ತಿಯಲ್ಲಿ ವಿವಿಧ ಜಾತಿಯ ಗಿಡಗಳನ್ನು ನೆಡಲು, ಅದರಲ್ಲಿಯು ಹೆಚ್ಚು ಆಕ್ಸಿಜನ್ ಉತ್ಪಾದಿಸುವ ಮರ, ಗಿಡಗಳನ್ನು ಬೆಳೆಸಲಾಗುತ್ತದೆ. ಈ ಗಿಡಗಳನ್ನು ಪೋಷಿಸಲು ಸ್ಥಳೀಯ ನಿವಾಸಿಗಳು ಸಹ ಕೈಜೋಡಿಸಿ ಬೆಳೆಸಬೇಕು, ಇದರಿಂದ ಮುಂದಿನ ಪೀಳಿಗೆಗೆ ಉತ್ತಮ ಪರಿಸರ ನಿರ್ಮಾಣ ಮಾಡಲು ಸಾಧ್ಯವಾಗಲಿದೆ ಎಂದರು.ಈ ನಾಲ್ಕು ಬಡಾವಣೆಗಳಲ್ಲಿ ಬೇವು, ಅರಳಿ, ಹೊಂಗೆ ಸೇರಿದಂತೆ 5400 ಗಿಡಗಳನ್ನು ನೆಡಲಾಗಿದೆ. ಮುಂದಿನ ವರ್ಷ ಮುಂಗಾರು ಹಂಗಾಮು ಆರಂಭವಾದ ತಕ್ಷಣ ಗಿಡಗಳನ್ನು ನೆಡಲು ಕ್ರಮವಹಿಸಲಾಗುತ್ತದೆ. ಇದರಿಂದ ಹೆಚ್ಚು ಗಿಡಗಳು ಉಳಿಯಲಿವೆ ಎಂದ ಅವರು ಶಿವಪಾರ್ವತಿ ಬಡಾವಣೆಯಲ್ಲಿ ಬೀದಿ ದೀಪ, ಒಳಚರಂಡಿ ವ್ಯವಸ್ಥೆ ಬಗ್ಗೆ ತಿಳಿಸಿದ್ದು ಪಾಲಿಕೆಯಿಂದ ಕ್ರಮ ವಹಿಸಲಾಗುತ್ತದೆ ಎಂದರು.

ಕಾರ್ಯಕ್ರಮದಲ್ಲಿ ಪಾಲಿಕೆ ಆಯುಕ್ತರಾದ ರೇಣುಕಾ, ರೈತ ಮುಖಂಡ ಬಲ್ಲೂರು ರವಿಕುಮಾರ್, ಬಡಾವಣೆ ಹಿತರಕ್ಷಣಾ ವೇದಿಕೆ ಅಧ್ಯಕ್ಷ ವಿಜಯಕುಮಾರ್, ಉಪ ಅರಣ್ಯ ಸಂರಕ್ಷಣಾಧಿಕಾರಿ ಶಶಿಧರ್, ಸಾಮಾಜಿಕ ಅರಣ್ಯ ವಿಭಾಗದ ಉಪ ಸಂರಕ್ಷಣಾಧಿಕಾರಿ ನಾಯಕ್ ಹಾಗೂ ವಿವಿಧ ನಿವಾಸಿಗಳು, ಅಧಿಕಾರಿಗಳು ಉಪಸ್ಥಿತರಿದ್ದರು.

## ವಿಶ್ವ ನದಿಗಳ ದಿನಾಚರಣೆಯ ಅಂಗವಾಗಿ ಸ್ವಚ್ಛತಾ ಹೀ ಸೇವಾ




» ದಾವಣಗೆರೆ

ರಾಜ್ಯ ಮಟ್ಟದ ಸಮನ್ವಯ ಸಂಸ್ಥೆ ದೊಡ್ಡಬಾತಿ ಹಾಗೂ ಹರಿಹರ ನಗರಸಭೆ ಇವರ ಸಹಯೋಗದೊಂದಿಗೆ ವಿಶ್ವ ನದಿಗಳ ದಿನಾಚರಣೆಯ ಅಂಗವಾಗಿ ಹರಿಹರ ನಗರ ತುಂಗಾಭದ್ರ ನದಿಯ ದಡದಲ್ಲಿ ಸ್ವಚ್ಛತಾ ಹೀ ಸೇವಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು. ಈ ವೇಳೆ ರಾಜ್ಯ ಮಟ್ಟದ ಸಮನ್ವಯ ಸಂಸ್ಥೆಯ ನಿರ್ದೇಶಕರಾದ ಡಾ. ಶಶಿಕುಮಾರ್ ಮೆಹರ್ವಾಡೆ ಇವರ ಮಾರ್ಗದರ್ಶನದಲ್ಲಿ ಸಂಸ್ಥೆಯ ಸಂಯೋಜಕರಾದ ಶೈಲಾಶ್ರೀ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿ ನೀರಿನ ಮಹತ್ವ ಹಾಗೂ ಅದನ್ನು ಹೇಗೆ ಸದ್ಬಳಕೆ ಮಾಡಿಕೊಳ್ಳಬೇಕು, ನದಿಗಳು ಮಾನವ ಕುಲಕ್ಕೆ ವರದಾನವಾಗಿದೆ, ಅವುಗಳನ್ನು ನಮ್ಮ ಮುಂದಿನ ಸಂಕುಲಕ್ಕೂ ಮೀಸಲಿಡಬೇಕು ಎಂದು ತಿಳಿಸಿದರು.ನದಿಗಳ ಬದಿ ಕಸ ಹಾಕುವುದರಿಂದ ಜಲಚರ ಪ್ರಾಣಿಗಳು ವಿನಾಶದ ಹಂಚಿನಲ್ಲಿ ಸಾಗುತ್ತಿವೆ, ಹಾಗಾಗಿ ನದಿ ಬದಿ ಕಸವನ್ನು ಹಾಕದಂತೆ ಎಲ್ಲರೂ ಹೆಚ್ಚರಿಕೆ ವಹಿಸಬೇಕು. ಜನರ ಉತ್ತಮ ಅರೋಗ್ಯದ ವಿಷಯವಾಗಿ ತೆಗೆದುಕೊಳ್ಳಬೇಕಾದ ಮುನ್ನೆಚ್ಚರಿಕೆ ಕ್ರಮಗಳ ಬಗ್ಗೆ ತಿಳಿಸಿ ಪ್ರತಿಜ್ಞಾ ವಿಧಿ ಭೋದಿಸಿದರು.
ಕಾರ್ಯಕ್ರಮದಲ್ಲಿ ನದಿ ಬದಿಯ ಬಟ್ಟೆ, ಕಸ, ಪ್ಲಾಸ್ಟಿಕ್, ಸ್ವಚ್ಛಗೊಳಿಸಿ ನಗರಸಭೆಯ ಕಸವಿಲೇವಾರಿ ವಾಹನದಲ್ಲಿ ಕಳುಹಿಸಲಾಯಿತು. ಕಾರ್ಯಕ್ರಮದಲ್ಲಿ ನಗರಸಭೆಯ ಆರೋಗ್ಯ ನಿರೀಕ್ಷಕರಾದ ಹನುಮಂತಪ್ಪ, ಕಾರ್ಯಕ್ರಮ ಸಹಾಯಕ ಅಧಿಕಾರಿ ಜಗದೀಶ್, ಎಸ್.ಎಲ್.ಸಿ.ಎ ಸಿಬ್ಬಂದಿಗಳು ಹಾಗೂ ಸ್ಥಳೀಯರು ಭಾಗವಹಿಸಿದ್ದರು.

ಪ್ರಮುಖ ಸುದ್ದಿ

# ಹಿಂದೂ ಮಹಾಗಣಪತಿ: ನಗರದಲ್ಲಿ ಬೈಕ್ ರ್‍ಯಾಲಿ

» ಚಿತ್ರದುರ್ಗ





ನಗರದ ಹಿಂದೂ ಮಹಾ ಗಣಪತಿಯ ಮಹೋತ್ಸವದ ಅಂಗವಾಗಿ ಇಂದು ನಗರದ ವಿವಿಧ ಬಡಾವಣೆಗಳಲ್ಲಿ ಸೆ. 28ರ ಶೋಭಾಯಾತ್ರೆಯ ಅಂಗವಾಗಿ ಬೈಕ್ ರ್‍ಯಾಲಿಯನ್ನು ನಡೆಸಲಾಯಿತು.

ನಗರದ ಹೊಳಲ್ಕೆರೆ ರಸ್ತೆಯಲ್ಲಿನ ಕನಕ ವೃತ್ತದಿಂದ ಆರಂಭವಾದ ಬೈಕ್ ರ್‍ಯಾಲಿಯನ್ನು ಶಾಸಕರಾದ ಕೆ.ಸಿ. ವಿರೇಂದ್ರ, ವಿಶ್ವ ಹಿಂದೂ ಪರಿಷತ್‌ನ ಕರ್ನಾಟಕ ದಕ್ಷಿಣ ಪ್ರಾಂತ ಕಾರ್ಯದರ್ಶಿ ಜಗನ್ನಾಥ್ ಶಾಸ್ತ್ರಿ ಉದ್ಘಾಟಿಸಿದರು. ದಾರಿಯುದ್ದಕ್ಕು ಬೈಕ್ ರ್‍ಯಾಲಿಯಲ್ಲಿ ಕುಳಿತ್ತಿದ್ದ ಭಕ್ತಾಧಿಗಳು ಜೈ ಶ್ರೀರಾಮ್, ಜೈ ಜೈ ಶ್ರೀರಾಮ ಹಿಂದೂ ಮಹಾ ಗಣಪತಿಕ್ಕಿ ಜೈ ಎಂದು ಕೂಗುತ್ತಾ, ಕೈಯಲ್ಲಿ ಕೇಸರಿ ಧ್ವಜವನ್ನು ಹಿಡಿದು ತೆಲೆಗೆ ಕೇಸರಿ ಪಟ್ಟಿಯನ್ನು ಕಟ್ಟಿಕೊಂಡು ಕೂರಳಿಗೆ ಕೇಸರಿ ಶಾಲನ್ನು ಹಾಕಿ ಕೊಂಡು ದಾರಿಯಲ್ಲಿ ಸಾಗುತ್ತಿದ್ದ ದೃಶ್ಯ ಸಾಮಾನ್ಯವಾಗಿ ಕಂಡು ಬಂದಿತು. ಇದರೊಂದಿಗೆ ಹಲವಾರು ಭಕ್ತಾಧಿಗಳು ತೆಲೆ ಕೇಸರಿಯ ಪೇಟವನ್ನು ಧರಿಸಿದ್ದು, ಮತ್ತೇ ಕೆಲವರು ಕೇಸರಿಯ ಜಬ್ಬವನ್ನು ಧರಿಸಿ ಮೆರವಣಿಗೆಯಲ್ಲಿ ಭಾಗವಹಿಸಿದ್ದು ಕಂಡು ಬಂದಿತು.

ಬೈಕ್ ರ್‍ಯಾಲಿಯೂ ನಗರದ ಕನಕ ವೃತ್ತದಿಂದ ಪ್ರಾರಂಭವಾಗಿ ಸಂಗೋಳ್ಳಿರಾಯಣ್ಣ ವೃತ್ತ, ಬುರುಜನಹಟ್ಟಿ ವೃತ್ತ, ಆನೇ ಬಾಗಿಲು, ಚಿಕ್ಕಪೇಟೆ, ಏಕನಾಥೇಶ್ವರಿ ಪಾದಗುಡಿ, ಕರುವಿನ ಕಟ್ಟೆ ವೃತ್ತ, ಜೋಗಿಮಟ್ಟಿ ರಸ್ತೆ, ಜಟ್ ಪಟ್ ನಗರ ಸ್ಟೇಡಿಯಂ ರಸ್ತೆ, ಬಿ,ಡಿ,ರಸ್ತೆ, ಮದಕರಿ ವೃತ್ತ, ಅಂಬೇಡ್ಕರ್ ವೃತ್ತ, ಒನಕೆ ಓಬವ್ವ ವೃತ್ತದ ಮೂಲಕ ಹಳೇ ಮಾಧ್ಯಮಿಕ ಶಾಲಾ ಆವರಣದಲ್ಲಿ ಅಂತ್ಯ ಗೊಳಿಸಲಾಯಿತು. ಬೈಕ್ ರ್‍ಯಾಲಿ ಸಾಗಿದ ದಾರಿಯುದ್ದಕ್ಕೂ ಜನತೆ ಅಕ್ಕ–ಪಕ್ಕದಲ್ಲಿ ನಿಂತು ಬೈಕ್ ರ್‍ಯಾಲಿ ಹೋಗುತ್ತಿದ್ದ ದೃಶ್ಯವನ್ನು ಕಣ್ಣು ತುಂಬಿಕೊಂಡರು. ಮಹಿಳೆಯರು ಮಕ್ಕಳು ಎನ್ನದೆ ಆಬಾಲವೃದ್ಧರಾಗಿ ದಾರಿಯ ಪಕ್ಕದಲ್ಲಿ ನಿಂತು ಇದನ್ನು ವಿಕ್ಷಣೆ ಮಾಡಿದರು. ಬೈಕ್ ರ್‍ಯಾಲಿ ಮಧ್ಯದಲ್ಲಿ ಹಲವಾರು ಬೈಕ್‌ಗಳು ವಿವಿಧ ರೀತಿಯ ಶಬ್ದವನ್ನು ಮಾಡುತ್ತಾ ಜನರನ್ನು ತಮ್ಮತ್ತ ಸೆಳೆಯುವ ಕಾರ್ಯವನ್ನು ಮಾಡಿದರು. ಬೈಕ್ ರ್‍ಯಾಲಿಯ ಜೊತೆಗೆ ಹಲವಾರು ಜೀಪುಗಳು ಕಾರುಗಳು ಸಹಾ ಭಾಗವಹಿಸಿದ್ದು ಕಂಡು ಬಂದಿತು.



## ಫಾಸ್ಟ್ ನ್ಯೂಸ್

### ಸರ್ವಧರ್ಮೀಯರ ವಧು ವರರ ರಾಜ್ಯಮಟ್ಟದ ಸಮಾವೇಶ ಇದೇ 29ರಂದು ಬೆಂಗಳೂರಿನಲ್ಲಿ

» ಚಿತ್ರದುರ್ಗ

ಚಿತ್ರದುರ್ಗದ ಬಸವೇಶ್ವರ ವಧು ವರರ ಮಾಹಿತಿ ಕೇಂದ್ರದ ವತಿಯಿಂದ ಇದೇ ತಿಂಗಳ 29-9- 2024ರ ಭಾನುವಾರ ಬೆಳಗ್ಗೆ 11 ಗಂಟೆಗೆ ಬೆಂಗಳೂರಿನ ಮಹಾರಾಷ್ಟ್ರ ಮಂಡಳ ಕುರುಬರ ಹಾಸ್ಟಲ್ ಎದುರು, ಗಾಂಧಿನಗರ ಎರಡನೇ ಮೇನ್ ಇಲ್ಲಿ ಸರ್ವಧರ್ಮೀಯರ ವಧು ವರರ ರಾಜ್ಯಮಟ್ಟದ ಸಮಾವೇಶವನ್ನು ಏರ್ಪಡಿಸಲಾಗಿದೆ ಎಂದು ಸಂಘಟಕ ಹಾಗೂ ಸಂಚಾಲಕರು ಆದ ಜೆ.ಎಂ. ಜಂಬಯ್ಯ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಅಂದಿನ ಸಮಾರಂಭದ ಸಾನಿಧ್ಯವನ್ನು ಚಿತ್ರದುರ್ಗ ಸಂಸ್ಥಾನ ಖಾಸಮಠದ ಗುರುಮಠಕಲ್ ನ ಶಾಂತವೀರ ಗುರುರಾಜೇಂದ್ರ ಮಹಾಸ್ವಾಮಿಗಳು ವಹಿಸಲಿದ್ದು, ಮುಖ್ಯ ಅತಿಥಿಗಳಾಗಿ ವಿಶ್ವಸಂಸ್ಥೆಯ ಪ್ರಶಸ್ತಿ ಪುರಸ್ಕೃತ ,ಬೆಳಕು ಅಕಾಡೆಮಿ ಸಂಸ್ಥಾಪಕಿ ಅಂಧ, ಬಡ ಹಾಗೂ ಬುದ್ಧಿಮಾಂದ್ಯ ಮಕ್ಕಳ ವಸತಿ ಶಾಲೆ ಬೆಂಗಳೂರು ಇವರು ವಹಿಸಲಿದ್ದಾರೆ.

### ತಾಯಿ ಹೆಸರಲ್ಲಿ ಗಿಡ ಕಾರ್ಯಕ್ರಮ



» ಚಿತ್ರದುರ್ಗ

ಸ್ವಚ್ಛ ಭಾರತ ಮಿಷನ್ ಪ್ರಯುಕ್ತ ನಗರದ ಮಾಳಪ್ಪನಹಟ್ಟಿಯ ಉಪ ಅರಣ್ಯ ಸಂರಕ್ಷಣಾ ಅಧಿಕಾರಿಗಳ ಕಚೇರಿ ಆವರಣದಲ್ಲಿ ಸಾಮಾಜಿಕ ಅರಣ್ಯ ವಿಭಾಗದಿಂದ ಬುಧವಾರ "ತಾಯಿ ಹೆಸರಲ್ಲಿ ಒಂದು ಗಿಡ" ನೆಡುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು. ಉಪ ಅರಣ್ಯ ಸಂರಕ್ಷಣಾ ಅಧಿಕಾರಿ ಹರೀಶ್.ಕೆ, ವಲಯ ಅರಣ್ಯಾಧಿಕಾರಿ ಉಷಾರಾಣಿ, ಉಪ ವಲಯ ಅರಣ್ಯಾಧಿಕಾರಿಗಳಾದ ಹರೀಶ್,ಮಂಜುಳಾ,ಮಂಜಮ್ಮ ,ಗಸ್ತು ಅರಣ್ಯ ಪಾಲಕರಾದ ಪ್ರಭುಶಂಕರ.ಹೆಚ್.ಟಿ ಹಾಗೂ ಸಾಮಾಜಿಕ ಅರಣ್ಯ ವಿಭಾಗದ ಎಲ್ಲಾ ಸಿಬ್ಬಂದಿಗಳು ಭಾಗವಹಿಸಿದ್ದರು.

### ಕೆಳಗೋಟೆ ಚನ್ನಕೇಶವ ದೇಗುಲ ಆವರಣದಲ್ಲಿ ಸ್ವಚ್ಛತಾ ಕಾರ್ಯ




» ಚಿತ್ರದುರ್ಗ

ಸ್ವಚ್ಛತಾ ಹೀ ಸೇವಾ ಅಭಿಯಾನದ ಅಂಗವಾಗಿ ಚಿತ್ರದುಗ ನಗರದ ಕೆಳಗೋಟೆಯ ಚನ್ನಕೇಶವ ದೇವಸ್ಥಾನದ ಆವರಣದಲ್ಲಿ ಗುರುವಾರ ಸ್ವಚ್ಛತಾ ಕಾರ್ಯ ನೆರವೇರಿಸಿದರು.

ಜಿಲ್ಲಾ ಆಯುಷ್ ಇಲಾಖೆ, ಚಿನ್ಮಯ ಮಯೂರ ಯೋಗ ಕ್ರೀಡಾ ಸಾಂಸ್ಕೃತಿಕ ಸಂಸ್ಥೆ, ಭಾರತೀಯ ಯೋಗ ಶಿಕ್ಷಣ ಸಂಸ್ಥೆ ಹಾಗೂ ಸಾರ್ವಜನಿಕರ ಸಹಯೋಗದೊಂದಿಗೆ ಸ್ವಚ್ಛತೆ ಕೈಗೊಳ್ಳಲಾಯಿತು.

ಈ ವೇಳೆ ಮಾತನಾಡಿದ ಜಿಲ್ಲಾ ಆಯುಷ್ ಅಧಿಕಾರಿ ಡಾ.ಚಂದ್ರಕಾಂತ ಎಸ್ ನಾಗಸಮುದ್ರ, ಶರೀರ ಸ್ವಚ್ಛವಾದರೆ ದೈಹಿಕ ಆರೋಗ್ಯ, ಮನಸ್ಸು ಸ್ವಚ್ಛವಾಗಿದ್ದರೆ ಮಾನಸಿಕ ಆರೋಗ್ಯ ಹಾಗೂ ಪರಿಸರ ಸ್ವಚ್ಛವಾದರೆ ಸಮಾಜದ ಆರೋಗ್ಯ. ಆದ ಕಾರಣ ಈ ಅಭಿಯಾನದ ಅಡಿಯಲ್ಲಿ ಧಾರ್ಮಿಕ ಸ್ಥಳವಾದ ಶ್ರೀ ಚನ್ನಕೇಶವ ದೇವಸ್ಥಾನದ ಆವರಣ ಸ್ವಚ್ಛ ಮಾಡಲಾಗುತ್ತಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಆಯುಷ್ ಕಚೇರಿ, ಜಿಲ್ಲಾಸ್ಪತ್ರೆ ಆಯುಷ್ ವಿಭಾಗದ ಅಧಿಕಾರಿಗಳು ಹಾಗೂ ಸಿಬ್ಬಂದಿ, ಆಯುಷ್ ವೈದ್ಯಾಧಿಕಾರಿಗಳು, ಯೋಗ ಸಂಸ್ಥೆಗಳ ಪದಾಧಿಕಾರಿಗಳಾದ ರವಿ ಅಂಬೇಕರ್, ಮುರಳಿ, ಸುನಿತಾ, ಮಂಜುಳ, ವಸಂತ ಲಕ್ಷ್ಮೀ, ಮಂಜುನಾಥ್ ಹಾಗೂ ಸದಸ್ಯರು ಮತ್ತು ಸಾರ್ವಜನಿಕರು ಸ್ವಚ್ಛತಾ ಕಾರ್ಯಕ್ಕೆ ಕೈಜೋಡಿಸಿದರು. ನಗರಸಭಾ ಸದಸ್ಯರಾದ ಮಂಜುನಾಥ್ ಹಾಗೂ ಮುಖಂಡರಾದ ಪ್ರಕಾಶ್ ಅವರು ಕಾರ್ಯಕ್ರಮಕ್ಕೆ ಸರ್ವ ಸಹಕಾರ ನೀಡಿದರು.

### ಯೋಗ ಶಾಖೆ ಆರಂಭ

» ಹಿರಿಯೂರು

ರಾಷ್ಟ್ರೀಯ ಅಕಾಡೆಮಿ ಶಾಲೆಯಲ್ಲಿ ಶ್ರೀ ಪತಂಜಲಿ ಯೋಗ ಶಿಕ್ಷಣ ಸಮಿತಿ ವತಿಯಿಂದ ನೂತನ ಯೋಗ ಶಾಖೆಯನ್ನು ಆರಂಭಿಸಲಾಯಿತು. ಈ ಸಂದರ್ಭದಲ್ಲಿ ಪ್ರಾಂತ ಸಂಚಾಲಕರಾದ ಏ ಕುಮಾರ್,ಜಿಲ್ಲಾಸಂಚಾಲಕರಾದಉಮೇಶ್‌ಜಿಎಂ, ತಾಲೂಕು ಸಂಚಾಲಕರಾದ ಜೀವಿ ಚಂದ್ರಕಾಂತ್, ಸಂಸ್ಕಾರ ಪ್ರಮುಖರಾದ, ಗಂಗಾಂಬಿಕ ತಾಲ್ಲೂಕು ಮಹಿಳಾ ಸಂಚಾಲಕರಾದ ನಿರ್ಮಲ, ತಿಪ್ಪಮ್ಮ, ಈಶ್ವರಣ್ಣ ಮುಂತಾದ ಯೋಗ ಬಂಧುಗಳು ಕಾರ್ಯಕ್ರಮದಲ್ಲಿ ಭಾಗಿಯಾಗಿದ್ದರು.

---

ಪೂರ್ವ ಸಿದ್ಧತೆ ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಸೂಚನೆ

# 46 ಪರೀಕ್ಷಾ ಕೇಂದ್ರಗಳಿಂದ 17798 ಅಭ್ಯರ್ಥಿಗಳು ನಿಷ್ಪಕ್ಷಪಾತವಾಗಿ ಪರೀಕ್ಷಾ ಕಾರ್ಯ ನಿರ್ವಹಿಸಿ

ಗ್ರಾಮ ಆಡಳಿತಾಧಿಕಾರಿಗಳ ನೇಮಕಾತಿಯ ಸ್ಪರ್ಧಾತ್ಮಕ ಸಾಮಾನ್ಯ ಪ್ರವೇಶ ಪರೀಕ್ಷೆ: ಸೆ.29ರಂದು ಕಡ್ಡಾಯ ಭಾಷಾ ಪರೀಕ್ಷೆ

» ಚಿತ್ರದುರ್ಗ



ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ವತಿಯಿಂದ ಇದೇ ಸೆ.29ರಂದು ನಡೆಯುವ ಗ್ರಾಮ ಆಡಳಿತಾಧಿಕಾರಿಗಳ ನೇಮಕಾತಿಯ ಸ್ಪರ್ಧಾತ್ಮಕ ಪರೀಕ್ಷೆಯ ಕಡ್ಡಾಯ ಕನ್ನಡ ಭಾಷಾ ಪರೀಕ್ಷೆ ನಡೆಯಲಿದ್ದು, ಪರೀಕ್ಷೆಯನ್ನು ಅತ್ಯಂತ ಪಾರದರ್ಶಕ, ನಿಷ್ಪಕ್ಷಪಾತವಾಗಿ, ಪರಿಣಾಮಕಾರಿಯಾಗಿ ಪರೀಕ್ಷಾ ಕಾರ್ಯ ನಿರ್ವಹಿಸಬೇಕು ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಗುರುವಾರ ಗ್ರಾಮ ಆಡಳಿತಾಧಿಕಾರಿಗಳ ನೇಮಕಾತಿಯ ಸ್ಪರ್ಧಾತ್ಮಕ ಸಾಮಾನ್ಯ ಪ್ರವೇಶ ಪರೀಕ್ಷಾ (ಕಡ್ಡಾಯ ಕನ್ನಡ ಭಾಷಾ ಪರೀಕ್ಷೆ) ಸಿದ್ಧತೆಯ ಕುರಿತು ಹಮ್ಮಿಕೊಂಡಿದ್ದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ವತಿಯಿಂದ ಇದೇ ಸೆ.29ರಂದು ನಡೆಯುವ ಗ್ರಾಮ ಆಡಳಿತಾಧಿಕಾರಿಗಳ ನೇಮಕಾತಿಯ ಸ್ಪರ್ಧಾತ್ಮಕ ಪರೀಕ್ಷೆಯ ಕಡ್ಡಾಯ ಕನ್ನಡ ಭಾಷಾ ಪರೀಕ್ಷೆಯು ಅರ್ಹತಾ ಪರೀಕ್ಷೆಯಾಗಿದೆ. ಜಿಲ್ಲೆಯ 46 ಪರೀಕ್ಷಾ ಕೇಂದ್ರಗಳಿಂದ ಒಟ್ಟು 17798 ಅಭ್ಯರ್ಥಿಗಳು ಪರೀಕ್ಷೆಗೆ ನೊಂದಾಯಿಸಿಕೊಂಡಿದ್ದಾರೆ. ಪರೀಕ್ಷಾ ಕೇಂದ್ರಗಳಲ್ಲಿ ಎಲ್ಲ ಅಗತ್ಯ ಮೂಲಸೌಕರ್ಯಗಳನ್ನು ಕಲ್ಪಿಸಬೇಕು. ಯಾವುದೇ ಕಾರಣಕ್ಕೂ ಪೀಠೋಪಕರಣ, ಕುಡಿಯುವ ನೀರು, ಶೌಚಾಲಯದ ವ್ಯವಸ್ಥೆ ಸೇರಿದಂತೆ ಮೂಲಸೌಕರ್ಯಗಳ ಕೊರತೆ ಆಗಬಾರದು. ಈ ನಿಟ್ಟಿನಲ್ಲಿ ಪರೀಕ್ಷಾ ಕೇಂದ್ರಗಳ ಮುಖ್ಯಸ್ಥರು ಅಗತ್ಯ ಕ್ರಮವಹಿಸಬೇಕು ಎಂದು ಕಟ್ಟುನಿಟ್ಟಿನ ಸೂಚನೆ ನೀಡಿದರು.

ಪರೀಕ್ಷಾ ಕಾರ್ಯದಲ್ಲಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರ ನೀಡಿರುವ ಮಾರ್ಗಸೂಚಿಗಳನ್ನು ತಪ್ಪದೇ ಪಾಲಿಸುವ ಮೂಲಕ ಯಾವುದೇ ಲೋಪದೋಷಗಳು ಆಗದಂತೆ ತಮಗೆ ನೀಡಿರುವ ಜವಾಬ್ದಾರಿಯನ್ನು ಬಹಳ ಎಚ್ಚರಿಕೆಯಿಂದ ಪರೀಕ್ಷಾ ಕಾರ್ಯ ನಿರ್ವಹಿಸಬೇಕು. ಪರೀಕ್ಷೆಯನ್ನು ಸುಗಮವಾಗಿ ನಡೆಸಲು ಅಗತ್ಯ ಸಿದ್ಧತೆಯನ್ನು ಕೈಗೊಳ್ಳಬೇಕು ಎಂದು ಹೇಳಿದರು.

ಪರೀಕ್ಷೆಗಳು ಪಾರದರ್ಶಕವಾಗಿ ಹಾಗೂ ಸುವ್ಯವಸ್ಥಿತವಾಗಿ ನಡೆಸುವ ನಿಟ್ಟಿನಲ್ಲಿ ಪರೀಕ್ಷಾ ಕೇಂದ್ರಗಳಲ್ಲಿ ಕಾನೂನು ಬಾಹಿರ ಚಟುವಟಿಕೆ, ಅಹಿತಕರ ಘಟನೆಗಳು ನಡೆಯದಂತೆ ಪರೀಕ್ಷೆಗಳನ್ನು ಶಾಂತ ವಾತವರಣದಲ್ಲಿ ನಡೆಸಲು ಪರೀಕ್ಷಾ ಕೇಂದ್ರದ 200 ಮೀಟರ್ ವ್ಯಾಪ್ತಿ ಪ್ರದೇಶದ ಸುತ್ತಲೂ ನಿಷೇಧಿತ ಪ್ರದೇಶವೆಂದು ಘೋಷಿಸಿ, ನಿಷೇಧಾಜ್ಞೆ ಜಾರಿಗೊಳಿಸಲಾಗಿದೆ. ಪರೀಕ್ಷಾ ಕೇಂದ್ರದ ವ್ಯಾಪ್ತಿಯಲ್ಲಿನ ಜೆರಾಕ್ಸ್ ಅಂಗಡಿ ಹಾಗೂ ಕಂಪ್ಯೂಟರ್ ಇಂಟರ್‌ನೆಟ್ ಕೇಂದ್ರಗಳನ್ನು ಪರೀಕ್ಷಾ ನಡೆಯುವ ದಿನದಂದು ಬೆಳಿಗ್ಗೆ 9 ಗಂಟೆಯಿಂದ ಮಧ್ಯಾಹ್ನ 1.30 ಗಂಟೆಯವರೆಗೆ ಮುಚ್ಚುವಂತೆ ಮತ್ತು ಪರೀಕ್ಷಾಕೇಂದ್ರಕ್ಕೆಅಭ್ಯರ್ಥಿಗಳುಯಾವುದೇ ಕಾರಣಕ್ಕೂ ಮೊಬೈಲ್ ಫೋನ್‌ಗಳನ್ನು ಹಾಗೂ ಎಲೆಕ್ಟ್ರಾನಿಕ್ ಉಪಕರಣಗಳನ್ನು ತರದಂತೆ ಜಿಲ್ಲಾಧಿಕಾರಿಗಳು ಈಗಾಗಲೇ ಆದೇಶ ಹೊರಡಿಸಿದ್ದಾರೆ ಎಂದು ತಿಳಿಸಿದ ಅವರು, ಪರೀಕ್ಷಾ ಕೇಂದ್ರಗಳಲ್ಲಿ ಉಪನ್ಯಾಸಕರು, ಕಚೇರಿ ಸಿಬ್ಬಂದಿಯವರು ಪರೀಕ್ಷೆ ನಡೆಯುವ ಅವಧಿಯಲ್ಲಿ ಮೊಬೈಲ್ ಫೋನುಗಳನ್ನು ತರುವುದನ್ನು ಕಡ್ಡಾಯವಾಗಿ ನಿಷೇಧಿಸಲಾಗಿದೆ ಎಂದು ಹೇಳಿದರು.

ಶಾಲಾ ಶಿಕ್ಷಣ ಇಲಾಖೆ ಪದವಿಪೂರ್ವ ಉಪನಿರ್ದೇಶಕ ಪುಟ್ಟಸ್ವಾಮಿ ಮಾತನಾಡಿ, ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ವತಿಯಿಂದ ಗ್ರಾಮ ಆಡಳಿತಾಧಿಕಾರಿಗಳ ನೇಮಕಾತಿಯ ಸ್ಪರ್ಧಾತ್ಮಕ ಸಾಮಾನ್ಯ ಪ್ರವೇಶ ಪರೀಕ್ಷೆಯ ಕಡ್ಡಾಯ ಕನ್ನಡ ಪರೀಕ್ಷೆಯು ಇದೇ ಸೆ.29ರಂದು ಬೆಳಿಗ್ಗೆ 10.30 ರಿಂದ ಮಧ್ಯಾಹ್ನ 12.30 ರವರೆಗೆ ನಡೆಯಲಿದ್ದು, ಜಿಲ್ಲೆಯಲ್ಲಿ ಒಟ್ಟು 46 ಪರೀಕ್ಷಾ ಕೇಂದ್ರಗಳನ್ನು ಸ್ಥಾಪಿಸಿಲಾಗಿದ್ದು, ಇದರಲ್ಲಿ 17798 ಅಭ್ಯರ್ಥಿಗಳು ಪರೀಕ್ಷೆ ಬರೆಯಲಿದ್ದಾರೆ ಎಂದರು.

ಜಿಲ್ಲೆಯ ಮೊಳಕಾಲ್ಮುರು ಹೊರತುಪಡಿಸಿ ಚಳ್ಳಕೆರೆಯಲ್ಲಿ 6 ಪರೀಕ್ಷಾ ಕೇಂದ್ರಗಳಿಂದ 2352 ಅಭ್ಯರ್ಥಿಗಳು, ಚಿತ್ರದುರ್ಗ ನಗರದಲ್ಲಿ 26 ಪರೀಕ್ಷಾ ಕೇಂದ್ರಗಳಿಂದ 10082 ಅಭ್ಯರ್ಥಿಗಳು, ಹಿರಿಯೂರು 5 ಕೇಂದ್ರಗಳಿಂದ 2016 ಅಭ್ಯರ್ಥಿಗಳು, ಹೊಳಲ್ಕೆರೆ 4 ಪರೀಕ್ಷಾ ಕೇಂದ್ರಗಳಿಂದ 1272 ಅಭ್ಯರ್ಥಿಗಳು ಹಾಗೂ ಹೊಸದುರ್ಗದಲ್ಲಿ 5 ಪರೀಕ್ಷಾ ಕೇಂದ್ರಗಳಿಂದ 2076 ಅಭ್ಯರ್ಥಿಗಳು ಸೇರಿದಂತೆ ಒಟ್ಟು 17798 ಅಭ್ಯರ್ಥಿಗಳು ಪರೀಕ್ಷಾ ಬರೆಯಲಿದ್ದಾರೆ. ಜಿಲ್ಲೆಯಲ್ಲಿ ಯಾವುದೇ ಸೂಕ್ಷ್ಮ ಮತ್ತು ಅತೀ ಸೂಕ್ಷ್ಮ ಕೇಂದ್ರಗಳು ಇರುವುದಿಲ್ಲ. ಎಲ್ಲ ಪರೀಕ್ಷಾ ಕೇಂದ್ರಗಳಿಗೂ ಹೆಚ್ಚಿನ ಬಂದೋಬಸ್ತ್ ಅವಶ್ಯಕತೆ ಇದೆ ಎಂದು ಹೇಳಿದರು.

ಸಭೆಯಲ್ಲಿ ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎಸ್.ಜೆ.ಕುಮಾರಸ್ವಾಮಿ, ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಮಂಜುನಾಥ್, ಜಿಲ್ಲಾ ಆರೋಗ್ಯಾಧಿಕಾರಿ ಡಾ.ಜಿ.ಪಿ.ರೇಣುಪ್ರಸಾದ್ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು, ಪರೀಕ್ಷಾ ಕೇಂದ್ರಗಳ ಮುಖ್ಯಸ್ಥರು, ವೀಕ್ಷಕರು ಇದ್ದರು.

---

## ವಿದ್ಯಾರ್ಥಿಗಳು ರ್‍ಯಾಗಿಂಗ್ ಮರೆತು ವಿದ್ಯಾಭ್ಯಾಸದ ಕಡೆ ಗಮನಕೊಡಿ; ನ್ಯಾಯಾಧೀಶರಾದ ಮಹಾವೀರ ಕರೆಣ್ಣವರ

» ದಾವಣಗೆರೆ



ವಿದ್ಯಾರ್ಥಿ ಜೀವನದಲ್ಲಿ ರ್‍ಯಾಗಿಂಗ್ ಎಂಬುವುದು ಪೆಡಂಭೂತ,ಇದುಸಮಾಜಘಾತುಕ,ಸಾಮಾಜಿಕ, ಬೌದ್ಧಿಕ ಮತ್ತು ಧಾರ್ಮಿಕ ಚಟುವಟಿಕೆಗಳಿಗೆ ವಿರೋಧವಾಗಿರುವ ರ್‍ಯಾಗಿಂಗ್‌ನ್ನು ಎಲ್ಲಾ ಹಂತದಿಂದಲೂ ದೂರವಿಡಬೇಕೆಂದು ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮಹಾವೀರ್ ಮಾ.ಕರೆಣ್ಣವರ್ ತಿಳಿಸಿದರು.

ಅವರು (25) ನಗರದ ಡಿ.ಆರ್.ಎಂ ಕಾಲೇಜಿನಲ್ಲಿ ಹಮ್ಮಿಕೊಳ್ಳಲಾಗಿದ್ದ ರ್‍ಯಾಗಿಂಗ್ ವಿರೋಧಿ ದಿನದ ಅರಿವು ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು. ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ಜೀವನ ಅಂದರೆ ಹೇಗೆ ಇರಬೇಕು, ವಿದ್ಯಾರ್ಥಿಗಳ ಉಜ್ವಲ ಭವಿಷ್ಯಕ್ಕಾಗಿ ಪಾಲಕ, ಪೋಷಕರು, ಶಿಕ್ಷಕರು, ಶಿಕ್ಷಣ ಸಂಸ್ಥೆಗಳು ಮತ್ತು ಸರ್ಕಾರಗಳು ಏನೆಲ್ಲಾ ಕ್ರಮಗಳನ್ನು ತೆಗೆದುಕೊಳ್ಳುತ್ತಾರೆ ಎನ್ನುವ ಬಗ್ಗೆ ವಿವರವಾಗಿ ವಿದ್ಯಾರ್ಥಿಗಳಿಗೆ ವಿವರಿಸಿ ಹೇಳಿದರು.

ರ್‍ಯಾಗಿಂಗ್ ನಂತಹ ಕೃತ್ಯಗಳಲ್ಲಿ ಭಾಗಿಯಾಗಿ ಪೊಲೀಸ್ ಠಾಣೆಯ ಮಟ್ಟಿಲೇರಿದರೆ ನಿಮ್ಮ ಭವಿಷ್ಯಕ್ಕೆ ನೀವೆ ತೊಂದರೆ ಮಾಡಿಕೊಂಡ ಹಾಗೇ ಎಂದು ವಿದ್ಯಾರ್ಥಿಗಳಿಗೆ ಕಿವಿ ಮಾತು ಹೇಳಿದರು. ಡಿ.ಆರ್.ಎಂ ಕಾಲೇಜಿನ ಪ್ರಾಂಶುಪಾಲರಾದ ರೂಪಶ್ರೀ ಅಧ್ಯಕ್ಷತೆ ವಹಿಸಿ ಮಾತನಾಡಿ ವಿದ್ಯಾರ್ಥಿಗಳು ಒಳ್ಳೆಯ ಸಂಸ್ಕಾರ ಬೆಳೆಸಿಕೊಂಡು ತಂದೆ ತಾಯಿಯರಿಗೆ ಮತ್ತು ಕಾಲೇಜಿಗೆ ಒಳ್ಳೆಯ ಹೆಸರು ತರಬೇಕು. ಕಾಲೇಜಿನಲ್ಲಿ ರ್‍ಯಾಗಿಂಗ್ ನಿಷೇಧ ಕುರಿತು ಸಮಿತಿಯನ್ನು ರಚಿಸಲಾಗಿದ್ದು, ಈ ಮೂಲಕ ಯಾವುದೇ ರ್‍ಯಾಗಿಂಗ್ ಚಟುವಟಿಕೆಗಳು ಕಂಡುಬಂದಲ್ಲಿ ಅಂತವರ ವಿರುದ್ಧ ಸೂಕ್ತ ಕ್ರಮ ಜರುಗಿಸಲಾಗುವುದು ಎಂದು ಎಚ್ಚರಿಸಿದರು.

ಕಾರ್ಯಕ್ರದಲ್ಲಿ ವಕೀಲರಾದ ಸಿ.ಪಿ.ಅನಿತಾ, ಎ.ವಿ.ಕೆ.ಕಮಲಮ್ಮಕಾಲೇಜಿನಪ್ರಾಂಶುಪಾಲರಾದ ಕಮಲಮ್ಮ ಸೊಪ್ಪಿನ ಹಾಗೂ ವಿದ್ಯಾರ್ಥಿ, ವಿದ್ಯಾರ್ಥಿನಿಯರು ಉಪಸ್ಥಿತರಿದ್ದರು.

## ನಗರ ಸ್ವಚ್ಛತೆಗೆ ಜನರ ಸಹಕಾರ ಅಗತ್ಯ; ನ್ಯಾ.ರಾಜೇಶ್ವರಿ ಎನ್ ಹೆಗಡೆ



» ದಾವಣಗೆರೆ

ನಮ್ಮ ಸಂಸ್ಕಾರ, ಸ್ವಭಾವದಲ್ಲೇ ಸ್ವಚ್ಛತೆ ಕೂಡಿರಬೇಕು ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ರಾಜೇಶ್ವರಿ ಎನ್. ಹೆಗಡೆ ತಿಳಿಸಿದರು. ಜಿಲ್ಲಾ ನ್ಯಾಯಾಂಗ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ವಕೀಲರ ಸಂಘ ಹಾಗೂ ಮಹಾನಗರ ಪಾಲಿಕೆಯ ಸಂಯುಕ್ತಾಶ್ರಯದಲ್ಲಿ ಗುಂಡಿ ಸರ್ಕಲ್‌ನಲ್ಲಿ ಹಮ್ಮಿಕೊಳ್ಳಲಾಗಿದ್ದ ಸ್ವಭಾವ ಸ್ವಚ್ಛತಾ, ಸಂಸ್ಕಾರ ಸ್ವಚ್ಛತಾ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು.ನಮ್ಮ ದೇಹ ಮತ್ತು ಆಹಾರದ ಬಗ್ಗೆ ಎಷ್ಟು ಕಾಳಜಿ ವಹಿಸುತ್ತೇವೋ, ಹಾಗೆಯೇ ನಮ್ಮ ಸುತ್ತಮುತ್ತಲಿನ ಪರಿಸರವನ್ನು ಸ್ವಚ್ಛವಾಗಿಡುವುದು ಎಲ್ಲರ ಕರ್ತವ್ಯವಾಗಿದೆ. ಬೀದಿ ಬದಿಯ ವ್ಯಾಪಾರಿಗಳು ಕಸವನ್ನು ಎಲ್ಲೆಂದರಲ್ಲಿ, ಎಸೆಯದೆ ಮಹಾನಗರ ಪಾಲಿಕೆಯ ಕಸ ಸಂಗ್ರಹ ವಾಹನಕ್ಕೆ ನೀಡಿ ಸ್ವಚ್ಛತೆ ಕಾಪಾಡಬೇಕು ಎಂದು ತಿಳಿಸಿದರು. ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಮಹಾವೀರ್ ಮಾ.ಕರೆಣ್ಣವರ್ ಪ್ರಾಸ್ತಾವಿಕವಾಗಿ ಮಾತನಾಡಿದರು.

ಮಹಾನಗರ ಪಾಲಿಕೆ ಆಯುಕ್ತರದ ರೇಣುಕಾ ಮಾತನಾಡಿ ಬೀದಿಬದಿಯ ವ್ಯಾಪಾರಿಗಳು ಸ್ವಯಂ ಪ್ರೇರಿತವಾಗಿ ಸ್ವಚ್ಛತೆ ಕಾಪಾಡಿಕೊಳ್ಳಬೇಕು. ಹಾಗೂ ಸಾರ್ವಜನಿಕರ ಆರೋಗ್ಯದ ದೃಷ್ಟಿಯಿಂದ ಬೀದಿ ಬದಿ ಹೋಟೆಲ್, ಇತರೆ ವ್ಯಾಪಾರಿಗಳು ಪ್ಲಾಸ್ಟಿಕ್ ಬಳಸದೆ ಬಾಳೆ ಎಲೆ ಬಳಸಬೇಕು ಎಂದು ತಿಳಿಸಿದರು. ಬೀದಿ ಬದಿಯ ವ್ಯಾಪಾರಿಗಳು ತಮ್ಮ ಕೆಲಸ ಮುಗಿದ ನಂತರ ಸಂಜೆ ವೇಳೆ ಮಹಾನಗರ ಪಾಲಿಕೆಯಿಂದ ಕಸ ಸಂಗ್ರಹ ವಾಹನ ಕಳಿಸಲಾಗುವುದು, ಅದರಲ್ಲಿ ಹಸಿ ಕಸ, ಒಣ ಕಸ ಬೇರ್ಪಡಿಸಿ ನೀಡಿ ಸ್ವಚ್ಛತೆ ಕಾಪಾಡಬೇಕೆಂದು ತಿಳಿಸಿದರು.

## ನಾಯಕನಹಟ್ಟಿನಲ್ಲಿ ಸ್ವಚ್ಚತಾ ಹೀ ಸೇವಾ ಪಾಕ್ಷಿಕ

**ಚಿತ್ರದುರ್ಗ:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಪ್ರವಾಸೋದ್ಯಮ ಇಲಾಖೆ ಸಹಯೋಗದೊಂದಿಗೆ ಬುಧವಾರ ನಾಯನನಹಟ್ಟಿಯಲ್ಲಿ ಸ್ವಚ್ಚತಾ ಹೀ ಸೇವಾ ಪಾಕ್ಷಿಕ-2024 ವಿಶೇಷ ಆಂದೋಲನ ಆಯೋಜಿಸಲಾಗಿತ್ತು. ಪಾಕ್ಷಿಕದ ಅಂಗವಾಗಿ ಶ್ರೀ ಗುರು ತಿಪ್ಪೇರುದ್ರಸ್ವಾಮಿ ದೇವಸ್ಥಾನ ಆವರಣದಲ್ಲಿ ಮಾನವ ಸರಪಳಿ ರಚಿಸಲಾಯಿತು. ಸ್ವಚ್ಚತಾ ಪ್ರತಿಜ್ಞಾವಿದಿ ಬೋಧಿಸಲಾಯಿತು. ಜಾಗೃತಿ ಜಾಥಾ ಹಾಗೂ ನಾಯಕನಹಟ್ಟಿ ಪಟ್ಟಣದಲ್ಲಿ ಸ್ವಚ್ಚತಾ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು.



---

## ಪ್ರಮುಖ ಸುದ್ದಿ

ಗ್ರಾಮ ಆಡಳಿತಾಧಿಕಾರಿಗಳ ಕಾರ್ಯನಿರ್ವಹಣೆಗೆ 17 ಯಾಫ್‌ಗಳ ಕಂಟಕ

# ಧರಣಿ ಸತ್ಯಾಗ್ರಹದ ಮೂಲಕ ಸರ್ಕಾರದ ವಿರುದ್ಧ ಪ್ರತಿಭಟನೆ

» ಚಳ್ಳಕೆರೆ




ಕರ್ನಾಟಕರಾಜ್ಯಗ್ರಾಮಆಡಳಿತಾಧಿಕಾರಿಗಳ ಸಂಘ ಕರೆಯ ಮೇರೆಗೆ ಇಲ್ಲಿನ ಗ್ರಾಮ ಆಡಳಿತಾಧಿಕಾರಿಗಳ ಸಂಘ ತಮ್ಮ ಬೇಡಿಕೆಗಳನ್ನುಈಡೇರಿಸುವಂತೆಒತ್ತಾಯಿಸಿ ತಾಲ್ಲೂಕು ಕಚೇರಿ ಮುಂಭಾಗದಲ್ಲಿ ಧರಣಿ ಸತ್ಯಾಗ್ರಹ ನಡೆಸಿದರು.

ಸಂಘದ ತಾಲ್ಲೂಕು ಅಧ್ಯಕ್ಷ ಎಂ.ಪ್ರಕಾಶ್ ತಹಶೀಲ್ದಾರ್ ರೇಹಾನ್‌ಪಾಷಗೆ ಮನವಿ ನೀಡಿ ಮಾತನಾಡಿ, ಸರ್ಕಾರ ಸುಮಾರು 17ಕ್ಕೂ ಹೆಚ್ಚು ಯಾಫ್‌ಗಳ ಮೂಲಕ ಕಾರ್ಯನಿರ್ವಹಿಸಲು ಸೂಚನೆ ನೀಡಿದೆ. ಇದರಿಂದ ಗ್ರಾಮೀಣ ಮಟ್ಟದಲ್ಲಿ ಕಾರ್ಯನಿರ್ವಹಿಸುವ ಗ್ರಾಮ ಆಡಳಿಯಾಧಿಕಾರಿಗಳಿಗೆ ತೊಂದರೆ ಉಂಟಾಗಿದೆ. ಯಾಫ್‌ಗೆ ಅಪ್ಲೋಡ್ ಮಾಡುವ ಸಂದರ್ಭದಲ್ಲಿ ಹಲವಾರು ತಾಂತ್ರಿಕ ಸಮಸ್ಯೆಗಳನ್ನು ಎದುರಿಸಬೇಕಾಗಿದೆ, ಪ್ರತಿನಿತ್ಯವೂ 17 ಯಾಫ್‌ನಲ್ಲಿ ಕೆಲಸ ನಿರ್ವಹಿಸುವುದು ಕಷ್ಟಕಾರ್ಯ. ಇದರಿಂದ ಗ್ರಾಮ ಆಡಳಿತಾಧಿಕಾರಿಗಳು ಅನಾರೋಗ್ಯಕ್ಕೆ ತುತ್ತಾಗಿದ್ದಾರೆ.ಯಾವುದೇಸಂದರ್ಭದಲ್ಲೂ ಕೆಲಸ ನಿರ್ವಹಿಸದ ಸ್ಥಿತಿ ಉಂಟಾಗಿದೆ. ಆದ್ದರಿಂದ ಸರ್ಕಾರ ಈ ಬಗ್ಗೆ ಗಮನಹರಿಸಿ ಗ್ರಾಮ ಆಡಳಿತಾಧಿಕಾರಿಗಳು ಅಧಿಕಾರಿಗಳ ಸೇವೆಯನ್ನು ಸರಳೀಕರಣಗೊಳಿಸುವಂತೆ ಮನವಿ ಮಾಡಿದರು.

ಮನವಿ ಸ್ವೀಕರಿಸಿ ಮಾತನಾಡಿದ ತಹಶೀಲ್ದಾರ್ ರೇಹಾನ್‌ಪಾಷ, ತಾವು ಸರ್ಕಾರಕ್ಕೆ ನೀಡಿದ ಮನವಿಯನ್ನು ಸ್ವೀಕರಿಸಿದ್ದು, ಜಿಲ್ಲಾಧಿಕಾರಿಗಳ ಮೂಲಕ ಸರ್ಕಾರಕ್ಕೆ ಕಳಿಸುವ ಭರವಸೆ ನೀಡಿದರು. ಗ್ರಾಮ ಲೆಕ್ಕಾಧಿಕಾರಿಗಳು ಒತ್ತಡದಲ್ಲೇ ಕಾರ್ಯನಿರ್ವಹಿಸುವ ಬಗ್ಗೆ ಸಾಕಷ್ಟು ಮಾಹಿತಿ ಬಂದಿದೆ. ಆದರೆ, ಈ ಹಂತದಲ್ಲಿ ಯಾವುದೇ ಬದಲಾವಣೆ ಮಾಡಲು ಸಾಧ್ಯವಾಗುವುದಿಲ್ಲ. ಸರ್ಕಾರದಿಂದ ಯಾವುದೇ ನಿರ್ದೇಶನ ಬಂದಿಲ್ಲ. ಆದ್ದರಿಂದ ತಮ್ಮ ಮನವಿ ಸ್ಪಂದಿಸುವಂತೆ ಜಿಲ್ಲಾಧಿಕಾರಿಗಳ ಮೂಲಕ ಸರ್ಕಾರದ ಮೇಲೆ ಒತ್ತಡ ಹೇರಲಾಗುವುದು ಎಂದರು.

ಇದೇ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ(ಪ್ರೊ.ಬಣ) ರಾಜ್ಯ ಉಪಾಧ್ಯಕ್ಷ ರೆಡ್ಡಿಹಳ್ಳಿವೀರಣ್ಣ ಮತ್ತು ರೈತ ಸಂಘದ ಹೋರಾಟಗಾರರು ಧರಣಿನಿರತ ಗ್ರಾಮ ಆಡಳಿತಾಧಿಕಾರಿಗಳ ಧರಣಿ ಸತ್ಯಾಗ್ರಹಕ್ಕೆ ಬೆಂಬಲ ವ್ಯಕ್ತಪಡಿಸಿದರು. ಸರ್ಕಾರ ಗ್ರಾಮ ಆಡಳಿತಾಧಿಕಾರಿಗಳ ಸಮಸ್ಯೆಗಳ ಬಗ್ಗೆ ಗಂಭೀರಚಿಂತನೆ ನಡೆಸಿ ಪರಿಹರಿಸುವಂತೆ ಒತ್ತಾಯಿಸಿದರು. ಗೌರವಾಧ್ಯಕ್ಷ ಆರ್. ರಂಗಸ್ವಾಮಿ, ಉಪಾಧ್ಯಕ್ಷ ಕರಿಬಸಜಯ್ಯ, ಪ್ರಧಾನ ಕಾರ್ಯದರ್ಶಿ ವೈ.ಹರೀಶ್, ದೇವರಾಜನಾಯ್ಕ, ಶಿವಾನಂದ, ಲಕ್ಷ್ಮಿಹಡಪದ, ಆರ್.ಪುಷ್ಪಲತಾ ಮುಂತಾದವರು ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ಸ್ವಚ್ಛತಾ ಹೀ ಸೇವಾ ಜಾಗೃತಿ ಅಭಿಯಾನ: ನೈಸರ್ಗಿಕ ಪರಿಸರದಿಂದ ಮಾತ್ರ ಉತ್ತಮ ಆರೋಗ್ಯ: ಜೆ.ಡಿ.ವೆಂಕಟೇಶ್



» **ಚಳ್ಳಕೆರೆ**

ನಗರದ ಸಾರ್ವಜನಿಕ ಆಸ್ಪತ್ರೆ ಆವರಣದಲ್ಲಿ ಬಾಪೂಜಿ ಪ್ರಥಮ ದರ್ಜೆ ಕಾಲೇಜಿನ ಎನ್‌ಎಸ್‌ಎಸ್ ಘಟಕ, ಸಾರ್ವಜನಿಕ ಆಸ್ಪತ್ರೆ, ನಗರಸಭೆಯ ಸಹಯೋಗದೊಂದಿಗೆ ಸ್ವಚ್ಛತಾ-ಹಿ-ಸೇವಾ ಅಭಿಯಾನಕ್ಕೆ ಆಸ್ಪತ್ರೆಯ ಆಡಳಿತಾಧಿಕಾರಿ ಡಾ.ಜೆ.ಡಿ.ವೆಂಕಟೇಶ್ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಸ್ವಚ್ಛತೆ ಇಲ್ಲದೆಯಾವುದೇಕೆಲಸಪರಿಪೂರ್ಣವಾಗುವುದಿಲ್ಲ, ಪ್ರತಿಯೊಬ್ಬ ವ್ಯಕ್ತಿಯೂ ಆರೋಗ್ಯವಂತನಾಗಿದ್ಧಾರೆ ಮಾತ್ರ ಸಮಾಜದಲ್ಲಿ ಸುಧಾರಣೆ ತರಲು ಸಾಧ್ಯ. ನಮ್ಮ ಆರೋಗ್ಯ ಗಟ್ಟಿಯಾಗಿ ಸ್ಥಿರವಾಗಿ ಇರಬೇಕಾದರೆ ನಮ್ಮ ಸುತ್ತಮುತ್ತಲ ವಾತಾವರಣ ಸ್ವಚ್ಛವಾಗಿರಬೇಕಾಗುತ್ತದೆ. ರಾಜ್ಯ ಸರ್ಕಾರ ಸ್ವಚ್ಛತಾ ಹೀ ಸೇವಾ ಅಭಿಯಾನದ ಮೂಲಕ ಸಮಾಜದ ಎಲ್ಲರಿಗೂ ಆರೋಗ್ಯವನ್ನು ತಂದುಕೊಡುವ ನಿಟ್ಟಿನಲ್ಲಿ ಈ ಕಾರ್ಯಕ್ರಮ ರೂಪಿಸಿದೆ. ಎಲ್ಲರೂ ಈ ಕಾರ್ಯದಲ್ಲಿ ಪಾಲ್ಗೊಂಡು ಸ್ವಚ್ಛತೆಯ ನಾಡನ್ನು ನಿರ್ಮಿಸಲು ಸರ್ಕಾರದೊಂದಿಗೆ ಕೈಜೋಡಿಸಿ ಎಂದರು. ಬಾಪೂಜಿ ಪ್ರಥಮ ದರ್ಜೆ ಕಾಲೇಜು ಪ್ರಾಂಶುಪಾಲ ಓ.ಬಾಬುಕುಮಾರ್ ಮಾತನಾಡಿ, ಸ್ವಚ್ಛತಾ ಹೀ ಸೇವಾ ಅಭಿಯಾನಕ್ಕೆ ಬಾಪೂಜಿ ವಿದ್ಯಾಸಂಸ್ಥೆಯೂ ಸಹ ಪೂರ್ಣಪ್ರಮಾಣದಲ್ಲಿ ಬೆಂಬಲ ನೀಡಿದೆ. ಕಾಲೇಜಿನ ಎನ್‌ಎಸ್‌ಎಸ್ ಘಟಕ ಹಾಗೂ ವಿದ್ಯಾರ್ಥಿಗಳು ಇಂದಿನ ಈ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದಾರೆ. ನಿರಂತರವಾಗಿ ಸ್ವಚ್ಛತೆಯ ಸಂರಕ್ಷಣೆಗೆ ಶ್ರಮವಹಿಸುತ್ತಾರೆ. ಎಲ್ಲಿ ಸ್ವಚ್ಛತೆ ಇರುತ್ತದೆಯೋ ಅಲ್ಲಿ ಮಾತ್ರ ಯಾವುದೇ ರೋಗಕ್ಕೆ ಅವಕಾಶವಿಲ್ಲ. ನಾವೆಲ್ಲರೂ ಪರಿಸರಪ್ರೇಮಿಗಳಾದರೆ ಮಾತ್ರ ಸ್ವಚ್ಛತೆ ಬಗ್ಗೆ ಇನ್ನೂ ಹೆಚ್ಚಿನ ಜಾಗೃತಿ ಮೂಡಿಸಬಹುದು ಎಂದರು. ಕಾರ್ಯಕ್ರಮದಲ್ಲಿ ಎನ್‌ಎಸ್‌ಎಸ್‌ಅಧಿಕಾರಿ ಜೆ.ತಿಪ್ಪೇಸ್ವಾಮಿ, ಪ್ರಾಧ್ಯಾಪಕರಾದ ಕರಿಯಣ್ಣ, ಉಮೇಶ್, ನಂದಿನಿ, ಮುಜೀಬುಲ್ಲಾ, ನೈರ್ಮಲ್ಯ ಇಂಜಿನಿಯರ್ ನರೇಂದ್ರಬಾಬು, ಆರೋಗ್ಯ ಶಿಕ್ಷಣಾಧಿಕಾರಿ ಎಸ್.ಬಿ.ತಿಪ್ಪೇಸ್ವಾಮಿ,ಮ್ಯಾಟ್ರನ್ ಮಂಜುಳಾ, ಆರೋಗ್ಯ ನಿರೀಕ್ಷಕರಾದ ಗಣೇಶ್, ಗೀತಾಕುಮಾರಿ, ಸುನೀಲ್, ರುದ್ರಮುನಿ ಮುಂತಾದವರು ಉಪಸ್ಥಿತರಿದ್ದರು.

### ಆದ್ಯ ಕಾಲೇಜ್ ಆಫ್ ಫಾರ್ಮಸಿಸ್‌ನಲ್ಲಿ ನಡೆದ ಫಾರ್ಮಸಿ ಡೇ ಆಚರಣೆ




» **ಚಿತ್ರದುರ್ಗ**

ಫಾರ್ಮಸಿಯಲ್ಲಿ ಗುಣಮಟ್ಟದ ಶಿಕ್ಷಣವಿರಬೇಕೆಂದು ತುಮಕೂರಿನ ಶ್ರೀದೇವಿ ಔಷಧ ವಿದ್ಯಾಲಯದ ನಿರ್ದೇಶಕ ಡಾ.ಬಿ.ಗೋಪಾಲಕೃಷ್ಣ ಹೇಳಿದರು. ಚಳ್ಳಕೆರೆ ಟೋಲ್‌ಗೇಟ್‌ನಲ್ಲಿರುವ ದೇವರಾಜ ಅರಸ್ ಶಿಕ್ಷಣ ಸಂಸ್ಥೆಯ ಅಂಗ ಸಂಸ್ಥೆ ಆದ್ಯ ಫಾರ್ಮಸಿ ಕಾಲೇಜಿನಲ್ಲಿ ಫಾರ್ಮಸಿ ಡೇ ಉದ್ಘಾಟಿಸಿ ಮಾತನಾಡಿದರು. ವೈದ್ಯಕೀಯ ಸೇವೆ ಅತ್ಯಂತ ಪವಿತ್ರವಾದುದು. ಸಾವು-ಬದುಕಿನ ನಡುವೆ ಹೋರಾಟ ನಡೆಸುತ್ತಿರುವವರಿಗೆ ಗುಣ ಮಟ್ಟದ ಚಿಕಿತ್ಸೆ ನೀಡಿ ಪ್ರಾಣ ಉಳಿಸುವಲ್ಲಿ ವೈದ್ಯರ ಪಾತ್ರ ಪ್ರಮುಖವಾದುದು. ಹಾಗಾಗಿ ವೈದ್ಯರನ್ನು ದೇವರ ಸಮಾನವಾಗಿ ಕಾಣಲಾಗುತ್ತದೆಂದು ತಿಳಿಸಿದರು. ಡಾ.ಯೋಗೇಶ್‌ಕುಮಾರ್ ಮಾತನಾಡಿ 1912 ರಲ್ಲಿ ಫಾರ್ಮಸಿ ದಿನವನ್ನು ಆರಂಭಿಸಲಾಯಿತು. ಅಂದಿನಿಂದ ಪ್ರತಿ ವರ್ಷವೂ ಫಾರ್ಮಸಿ ದಿನವನ್ನು ಆಚರಿಸಿಕೊಂಡು ಬರಲಾಗುತ್ತಿದೆ ಎಂದರು. ಪ್ರೊ.ಆರ್.ಎಸ್.ರಾಜು ಮಾತನಾಡಿ 2019 ರಲ್ಲಿ ವಿಶ್ವವೇ ತಲ್ಲಣಿಸುವಂತ ಕೋವಿಡ್ ಎದುರಾದಾಗ ವೈದ್ಯರು ಹಾಗೂ ದಾದಿಯರು ತಮ್ಮ ಪ್ರಾಣದ ಹಂಗು ತೊರೆದು ಹಗಲು-ಇರುಳೆನ್ನದೆ ಕೋವಿಡ್‌ಗೆ ಒಳಗಾದವರಿಗೆ ಚಿಕಿತ್ಸೆ ನೀಡಿದ್ದಾರೆಂದು ಆದ್ಯ ಕಾಲೇಜ್ ಆಫ್ ಫಾರ್ಮಸಿ ಮಕ್ಕಳಿಗೆ ವೈದ್ಯಕೀಯ ಸೇವೆಯ ಪ್ರಾಮುಖ್ಯತೆ ಮತ್ತು ಉಪಯೋಗವನ್ನು ಮನವರಿಕೆ ಮಾಡಿದರು.ಫಾರ್ಮಸಿಸ್ ದಿನಾಚರಣೆಯ ಅಧ್ಯಕ್ಷತೆ ವಹಿಸಿದ್ದ ಆದ್ಯ ಕಾಲೇಜ್ ಆಫ್ ಫಾರ್ಮಸಿ ಪ್ರಾಂಶುಪಾಲರಾದ ಡಾ.ಪಾಲಾಕ್ಷ ಮಾತನಾಡುತ್ತ ಫಾರ್ಮಸಿ ಕೊಡುಗೆ ಪ್ರಪಂಚಕ್ಕೆ ಅದ್ಭುತವಾದುದು. ಫಾರ್ಮಸಿ ವಿದ್ಯಾರ್ಥಿಗಳು ತಮ್ಮ ಶಿಕ್ಷಣದ ಕಡೆ ಹೆಚ್ಚಿನ ಗಮನ ಕೊಟ್ಟು ಕೌಶಲ್ಯವನ್ನು ಬೆಳೆಸಿಕೊಳ್ಳುವಂತೆ ಕರೆ ನೀಡಿದರು.

## ಹಿಂದೂ ಮಹಾ ಗಣಪತಿ ಶೋಭಾಯಾತ್ರೆಗೆ ನಗರ ಸಜ್ಜು

# ನಗರದ ವಿವಿಧ ವೃತ್ತಗಳಿಗೆ ಅಲಂಕಾರ









» **ಚಿತ್ರದುರ್ಗ**

ನಗರದಲ್ಲಿ ನಡೆಯುತ್ತಿರುವ ಹಿಂದೂ ಮಹಾ ಗಣಪತಿ ಶೋಭಾಯಾತ್ರೆಯ ಅಂಗವಾಗಿ ನಗರದ ವಿವಿಧ ವೃತ್ತಗಳಲ್ಲಿನ ಮೂರ್ತಿಗಳಿಗೆ ವಿಶೇಷವಾದ ಆಲಂಕಾರ 'ವನ್ನು ಮಾಡಲಾಗಿದೆ. ಪ್ರತಿ ವರ್ಷವೂ ಸಹಾ ಇದೆ ರೀತಿ ಅಲಂಕಾರವನ್ನು ಹಿಂದು ಮಹಾ ಗಣಪತಿ ಸೇವಾ ಸಮಿತಿಯವತಿಯಿಂದ ಮಾಡಲಾಗುತ್ತದೆ.

ನಗರದ ಮಜೆಸ್ಟಿಕ್ ವೃತ್ತದಲ್ಲಿನ ಮದಕರಿನಾಯಕರ ಪ್ರತಿಮೆ ಹಿಂದಗಡ 'ಯಲ್ಲಿ ಕೋಟೆಯ ಆಲಂಕಾರವನ್ನು ಮಾಡಲಾಗಿದ್ದೆ ಮೆಲಗಡೆಯಲ್ಲಿ ಶಿವನ ವಿಗ್ರಹ ಅದೆ ತಲೆಯ ಮೇಲೆ ತ್ರಿಶೋಲವನ್ನು ಪ್ರತಿಷ್ಠಾಪಿಸಲಾಗಿದೆ. ಅಲ್ಲದೆ ಕೆಳಗಡೆಯಲ್ಲಿ ಅಕ್ಕ-ಪಕ್ಕದಲ್ಲಿ ಆನೆಗಳ ಮೂರ್ತಿಯನ್ನು ಇರಿಸಲಾಗಿದೆ. ಇದರೊಂದಿಗೆ ಕೋಟೆಯ ಭಾಗದಲ್ಲಿ ಹಸಿರಿನ ಸೋಬಗನ್ನು ನಿರ್ಮಾಣ ಮಾಡಲಾಗಿದೆ. ಮದಕರಿ ನಾಯಕನ ಪ್ರತಿಮೆಯ ಸುತ್ತಲೂ ವಿದ್ಯುತ್ ದೀಪದ ಅಲಂಕಾರವನ್ನು ಮಾಡಲಾಗಿದೆ.

ಇನ್ನೂ ಜಿಲ್ಲಾಧಿಕಾರಿಗಳ ಕಚೇರಿ ವೃತ್ತದಲ್ಲಿನ ಒನಕೆ ಓಬವ್ವ ಪ್ರತಿಮೆಗೂ ಸಹಾ ವಿಶೇಷವಾದ ಅಲಂಕಾರವನ್ನು ಮಾಡಲಾಗಿದೆ. ಚನ್ನಮ್ಮಳ ಹಿಂದೆಗಡೆಯಲ್ಲಿ ಕೋಟೆಯ ಅಲಂಕಾರವನ್ನು ಮಾಡಲಾಗಿದ್ದು, ದ್ವಾರ ಬಾಗಿಲನ್ನು ನಿರ್ಮಾಣ ಮಾಡಲಾಗಿದೆ ಇಲ್ಲಿ ಚನ್ನಮ್ಮ ಹೈದರಾಲಿ ಸೈನಿಕರನ್ನು ಸದೆ ಬಡಿಯುವ ಚಿತ್ರಕ್ಕೆ ಸೂಕ್ತವಾದ ಹೊಂದಾಣಿಕೆಯಾಗಿದೆ. ಇದರೊಂದಿಗೆ ವಿದ್ಯುತ್ ದೀಪದ ಅಲಂಕಾರವನ್ನು ಸಹಾ ಮಾಡಲಾಗಿದೆ. ನಗರ ಪೋಲಿಸ್ ಠಾಣೇಯ ಮುಂಭಾಗದಲ್ಲಿನ ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ರವರ ಪ್ರತಿಮೆಗೂ ಸಹಾ ಈ ಬಾರಿ ಅಲಂಕಾರವನ್ನು ಮಾಡಲಾಗಿದೆ. ಇಲ್ಲಿ ಅಂಬೇಡ್ಕರ್ ರವರಿಗೆ ರಾಜರ ರೀತಿಯ ದ್ವಾರವನ್ನು ನಿರ್ಮಾಣ ಮಾಡಿ ಅದರಲ್ಲಿ ಅಂಬೇಡ್ಕರ್‌ರವರ ಪ್ರತಿಮೆಯನ್ನು



ಇರಿಸಿದಂತೆ ಕಾಣುತ್ತಿದೆ. ಪ್ರತಿಮೆ ಮಧ್ಯದಲ್ಲಿ ದೇಶದ ಲಾಂಚನವಾದ ಗಂಡು ಬೇರುಡವನ್ನು ಇರಿಸಲಾಗಿದೆ.

ಇದರಿಂದ ಮುಂದಿನ ಮಹಾವೀರ ವೃತ್ತದಲ್ಲಿಯೂ ಸಹಾ ವಿಶಿಷ್ಟ ರೀತಿಯ ಅಲಂಕಾರವನ್ನು ಮಾಡಲಾಗಿದೆ. ಇಲ್ಲಿ ಮಹಾವೀರ ಲಾಂಚನ ಇನ್ನೂ ನಿರ್ಮಾಣವಾಗುತ್ತಿರುವುದರಿಂದ ಅಲ್ಲಿ ರಾಜ ಮಹಾರಾಜ್ರ ಮನೆಯಲ್ಲಿ ಇರುವಂತ ದ್ವಾರ ಭಾಗಿಲುಗಳನ್ನು ನಿರ್ಮಾಣ ಮಾಡಲಾಗಿದೆ.ಅಕ್ಕ-ಪಕ್ಕದಲ್ಲಿ ದೊಡ್ಡದಾದ ಗಂಟೆಗಳನ್ನು ನಿರ್ಮಾನ ಮಾಡಲಾಗಿದೆ. ಮಧ್ಯದಲ್ಲಿ ಚಿತ್ತಾರವಾದ ಬಾಗಿಲು ಹಾಗೂ ವಿದ್ಯುತ್ ದೀಪದ ಅಲಂಕಾರಗಳನ್ನು ನಿರ್ಮಾಣ ಮಾಡಲಾಗಿದೆ.

ನಗರದ ತಾಲ್ಲೂಕು ಕಚೇರಿ ಹತ್ತಿರದ ವಾಸವಿ ವೃತಕ್ಕೂ ಸಹಾ ವಿಶೇಷವಾದ ಅಲಂಕಾರವನ್ನು ಮಾಡಲಾಗಿದೆ. ವಾಸವಿ ವೃತ್ತವನ್ನು ಪೂರ್ಣವಾಗಿ ಕಂಭಗಳಿಂದ ಅಲಂಕಾರ ಮಾಡಿದ್ದು, ಹಿಂದೆ ಮುಂದಗಡೆಯಲ್ಲಿ ಮಹಿಳೆಯ ಪ್ರತಿಮೆಯನ್ನು ಇರಿಸಲಾಗಿದೆ. ಅಲ್ಲದೆ ಮೇಲಗಡೆಯಲ್ಲಿ ವಿದ್ಯುತ್ ದೀಪದ ಅಲಂಕಾರವನ್ನು ಮಾಡಲಾಗಿದೆ. ಅದರ ಮೇಲಗಡೆಯಲ್ಲಿ ಆನೆಯ ಮುಖವನ್ನು ಇರಿಸಲಾಗಿದೆ. ಹೋಳಲ್ಕೆರೆ ರಸ್ತೆಯ ಸಂಗೊಳ್ಳಿ ರಾಯಣ್ಣನ ಪ್ರತಿಮೆಗೂ ಸಹಾ ಅಲಂಕಾರವನ್ನು ಮಾಡಲಾಗಿದೆ. ಇಲ್ಲಿ ರಾಯಣ್ಣನ ಹಿಂದೆಗಡೆಯಲ್ಲಿ ಅರಮನೆಯ ಚಿತ್ರದ ರೀತಿಯಲ್ಲಿ ನಿರ್ಮಾಣ ಮಾಡಲಾಗಿದೆ.ಅಕ್ಕ-ಪಕ್ಕದಲ್ಲಿಕಂಬಗಳನ್ನು ಇರಿಸಲಾಗಿದೆ. ಮೇಲಗಡೆಯಲ್ಲಿ ವಿಶೇಷವಾದ ಅಲಂಕಾರವನ್ನ ಸಹಾ ಮಾಡಲಾಗಿದೆ. ಸುತ್ತಲೂ ಸಹಾ ಅಡ್ಡ ಗೋಡೆಯನ್ನು ನಿರ್ಮಿಸಲಾಗಿದೆ.

ಇನ್ನೂ ಕೊನೆಯದಾಗಿ ಬರಗೇರಮ್ಮ ದೇವಾಲಯದ ಬಳಿಯಲ್ಲಿನ ಕನಕ ಪ್ರತಿಮೆಗೂ ಸಹಾ ವಿಶೇಷವಾದ ಅಲಂಕಾರವನ್ನು ಮಾಡಲಾಗಿದೆ . ಇಲ್ಲಿ ಕನಕ ಮೂರ್ತಿಯ ಅಕ್ಕ-ಪಕ್ಕದಲ್ಲಿ ತಿರುಪತಿ ತಿಮಪ್ಪನ ಅಕ್ಕ-ಪಕ್ಕದಲ್ಲಿ ಇರುವಂತ ಶಂಕ- ಚಕ್ರವನ್ನು ನಿರ್ಮಾಣ ಮಾಡಲಾಗಿದೆ. ಮೇಲಗಡೆ ನವಿಲು ಕನಕನ ಮೂರ್ತಿಯ ಮೇಲೆ ತಿರುಪತಿ ತಿಮ್ಮಪ್ಪನ ನಾಮವನ್ನು ನಿರ್ಮಾಣ ಮಾಡಲಾಗಿದೆ. ಇದರೊಂದಿಗೆ ಅಕ್ಕ-ಪಕ್ಕದಲ್ಲಿ ಕಂಭಗಳನ್ನು ಇರಿಸಿ ಅದಕ್ಕೆ ಛತ್ರಿಗಳನ್ನು ಜೋಡಿಸಿ ಶಿಲಾಬಾಲಕಿಯರನ್ನು ಇರಿಸಿ ವಿದ್ಯುತ್ ದೀಪದ ಅಲಂಕಾರವನ್ನು ಮಾಡಲಾಗಿದೆ. ಕೆಳಗಡೆಯಲ್ಲಿ ಕೇಸರಿಯ ಅಲಂಕಾರವನ್ನು ಸಹಾ ಮಾಡಲಾಗಿದೆ.

ಇದ್ದಲ್ಲದೆ ಹಿಂದೂ ಮಹಾ ಗಣಪತಿ ಪ್ರತಿಷ್ಠಾಪನದ ಜೈನ್‌ಧಾಮದಿಂದ ಹಿಡಿದು ನಗರದ ಎಲ್ಲಾ ಬೀದಿಗಳಲ್ಲಿಯೂ ಸಹಾ ವಿದ್ಯುತ್ ದೀಪದ ಅಲಂಕಾರವನ್ನು ಮಾಡಲಾಗಿದೆ ಅದರಲ್ಲೂ ಹಿಂದು ಮಹಾ ಗಣಪತಿ ಹೀಗುವ ಶೋಭಾಯತ್ರೆಯ ದಾರಿಯಲ್ಲಿ ಪೂರ್ಣವಾಗಿ ವಿದ್ಯುತ್ ದೀಪದ ಅಲಂಕಾರವನ್ನು ಮಾಡಲಾಗಿದೆ.

ಒಟ್ಟಿನಲ್ಲಿ ಸೆ. 28ರಂದು ನಡೆಯುವ ಶೋಭಾಯತ್ರೆಗೆ ಚಿತ್ರದುರ್ಗ ನಗರದ ಪೂರ್ಣವಾಗಿ ಸಜ್ಜಾಗಿದೆ, ಎಲ್ಲರ ಮನೆ , ಮಳಿಗೆಯ ಮೇಲೂ ಸಹಾ ಕೇಸರಿ ಧ್ವಜಗಳನ್ನುಹಾರಿಸಲಾಗಿದೆ. ಇದರೊಂದಿಗೆ ವಿದ್ಯುತ್ ದೀಪಗಳ ಅಲಂಕಾರ ಮಾಡಲಾಗಿದೆ. ಜನತೆಯೂ ಸಹಾ ಇದರಲ್ಲಿ ಭಾಗವಹಿಸಲಿ ರಾಜ್ಯದ ವಿವಿಧೆಡೆಗಳಿಂದ ಆಗಮಿಸುತ್ತಿದ್ದಾರೆ ಜಿಲ್ಲಾಡಳಿತ ಹಾಗೂ ರಕ್ಷಣಾ ಇಲಾಖೆಯೂ ಸಹಾ ಯಾವುದೇ ರೀತಿಯ ಗಲಾಟೆಗೆ ಅವಕಾಶ ನೀಡದಂತೆ ಎಚ್ಚರಿಕೆಯನ್ನು ವಹಿಸಿದೆ.

## ಜಿಲ್ಲಾ ಮಟ್ಟದ ದಸರಾ ಕ್ರೀಡಾ ಕೂಟದಲ್ಲಿ ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ಹೇಳಿಕೆ

# ಕ್ರೀಡೆಯಲ್ಲಿ ಸೋಲು ಗೆಲುವು ಸಹಜ ಸಮಾನವಾಗಿ ಸ್ವೀಕರಿಸಿ




» **ಚಿತ್ರದುರ್ಗ**

ಜಿಲ್ಲಾ ಮಟ್ಟದ ದಸರಾ ಕ್ರೀಡಾ ಕೂಟದಲ್ಲಿ ಉತ್ತಮವಾಗಿ ತಮ್ಮ ಸಾಮರ್ಥ್ಯಗಳನ್ನು ಹೊರಹಾಕುವ ಮೂಲಕ ಮುಂದಿನ ರಾಜ್ಯ ಮಟ್ಟದ ಕ್ರೀಡಾ ಕೂಟದಲ್ಲಿ ನಮ್ಮ ಜಿಲ್ಲೆಯನ್ನು ಪ್ರತಿನಿಧಿಸಬೇಕು. ಕ್ರೀಡೆಯಲ್ಲಿ ಸೋಲು ಗೆಲುವು ಸಹಜ. ಗೆದ್ದಾಗ ಗೆಲುವನ್ನು ಯಾವ ರೀತಿ ಸ್ವೀಕರಿಸುವಿರೋ, ಸೋತಾಗಲೂ ಕೂಡ ಅದೇ ಮನಸ್ಥಿತಿಯಲ್ಲಿ ಸ್ವೀಕರಿಸಬೇಕು ಎಂದು ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ಕ್ರೀಡಾಪಟುಗಳಿಗೆ ಸಲಹೆ ನೀಡಿದರು. ಜಿಲ್ಲಾಡಾಳಿತ, ಜಿಲ್ಲಾ ಪಂಚಾಯತ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಕರ್ನಾಟಕ ಕ್ರೀಡಾ ಪ್ರಾಧಿಕಾರ ಬೆಂಗಳೂರು ಹಾಗೂ ಜಿಲ್ಲೆಯ ವಿವಿಧ ಕ್ರೀಡಾ ಸಂಸ್ಥೆಗಳ ಸಹಯೋಗದಲ್ಲಿ ಗುರುವಾರ ನಗರದ ಒನಕೆ ಓಬವ್ವ ಕ್ರೀಡಾಂಗಣದಲ್ಲಿ ಆಯೋಜಿಸಲಾಗಿದ್ದ ಜಿಲ್ಲಾ ಮಟ್ಟದ ದಸರಾ ಕ್ರೀಡಾ ಕೂಟ ಉದ್ಘಾಟಿಸಿ ಅವರು ಮಾತನಾಡಿದರು.

ಕ್ರೀಡಾಪಟುಗಳು ಈ ಕೂಟದಲ್ಲಿ ಜಯಗಳಿಸಿ ರಾಜ್ಯ ಮಟ್ಟದಲ್ಲಿ ಪ್ರತಿನಿಧಿಸಿದಾಗ ನಿಮ್ಮ ಹೆಸರನಿಂದ ಗುರುತಿಸದೇ, ಚಿತ್ರದುರ್ಗ ಜಿಲ್ಲೆಯಿಂದ ಪ್ರತಿನಿಧಿಸಿದ್ದೀರಿ ಎಂದು ಗುರುತಿಸಲಾಗುತ್ತದೆ. ಆದ್ದರಿಂದ ನಿಮ್ಮ ವರ್ತನೆಗಳೂ ಸಹ ಜಿಲ್ಲೆಯ ಗೌರವವನ್ನು ಕಾಪಾಡುತ್ತವೆ. ಈ ಜವಾಬ್ದಾರಿ ಕ್ರೀಡಾಪಟುಗಳ ಮೇಲಿದೆ. ಇದನ್ನು ಮನಸ್ಸಿನಲ್ಲಿಟ್ಟುಕೊಂಡು ಗೌರವಯುತವಾಗಿ ನಿಭಾಯಿಸಿ, ರಾಜ್ಯ, ರಾಷ್ಟ್ರೀಯ ಹಾಗೂ ಅಂತರಾಷ್ಟ್ರೀಯ ಮಟ್ಟದಲ್ಲಿ ಜಿಲ್ಲೆಯಿಂದ ಪ್ರತಿನಿಧಿಸಿ ಹೆಚ್ಚಿನ ಪದಕಗಳನ್ನು ತರಬೇಕೆಂದು ಆಶಯ ವ್ಯಕ್ತಪಡಿಸಿದರು.

## ಪ್ರಮುಖ ಸುದ್ದಿ

## ವಿಶ್ವಗರ್ಭ ನಿರೋಧ ದಿನದ ಕಾರ್ಯಕ್ರಮದಲ್ಲಿ ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಿ.ಮೂಗಪ್ಪ


# ಅಂತರದ ಹೆರಿಗೆಗಾಗಿ ಕುಟುಂಬ ಯೋಜನೆ ಆಯ್ಕೆ ಮಾಡಿಕೊಳ್ಳಿ

» **ಚಿತ್ರದುರ್ಗ**

ಕುಟುಂಬದ ಸ್ವಾಸ್ಥ್ಯಕ್ಕೆ ಅಂತರದ ಹೆರಿಗೆಗಾರಿ ಕುಟುಂಬ ಯೋಜನೆ ಆಯ್ಕೆ ಮಾಡಿಕೊಳ್ಳಿ ಎಂದು ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಿ.ಮೂಗಪ್ಪ ಸಲಹೆ ನೀಡಿದರು.

ಇಲ್ಲಿನ ನೆಹರು ನಗರ ಆರೋಗ್ಯ ಕೇಂದ್ರ ವ್ಯಾಪ್ತಿಯ ಅಗಸನಕಲ್ಲು ಅಂಗನವಾಡಿ "ಎ" ಕೇಂದ್ರದಲ್ಲಿ ಅತ್ತೆ ಸೊಸೆಯರ ಸಮಾಲೋಚನೆಯಲ್ಲಿ ವಿಶ್ವಗರ್ಭ ನಿರೋಧಕ ದಿನದ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಚಿಕ್ಕ ಕುಟುಂಬದ ಆದರ್ಶ ಪಾಲಿಸಿ ಸುಖೀ ಜೀವನ ನಡೆಸಿ. ಕುಟುಂಬ ಯೋಜನೆಗಳ ಆಯ್ಕೆ ಸ್ವಾತಂತ್ರ್ಯ ನಿಮ್ಮದು. ಇಲಾಖೆಯಲ್ಲಿ ಕುಟುಂಬ ಯೋಜನಾ ವಿಧಾನಗಳ ಸೇವೆ ಉಚಿತ ನಿಮ್ಮ ಆಯ್ಕೆಯಂತೆ, ನೀವು ನೀಡಿದ ಸಮಯದಲ್ಲೇ ಸೇವೆ ನೀಡಲಾಗುತ್ತದೆ ಎಂದು ಹೇಳಿದರು.



ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಿ.ಜಾನಕಿ ತಾತ್ಕಾಲಿಕ ಕುಟುಂಬ ಯೋಜನೆ ಲಭ್ಯವಿರುವ ವಿವಿಧ ಸೇವೆಗಳಾದ ನುಂಗುವ ಮಾತ್ರೆ, ವಂಕಿ, ಕಕಖಗಅಆ, ಖಗಆ, ಡಿಂಪಾ ಚುಚ್ಚುಮದ್ದುಗಳ ಬಗ್ಗೆ ಸವಿವರವಾಗಿ ಮಾಹಿತಿ ನೀಡಿದರು.

ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್.ಮಂಜುನಾಥ್ ಮಾತನಾಡಿ, ಕುಟುಂಬ ಯೋಜನೆ ಅಳವಡಿಕೆ ಪ್ರತೀ ದಂಪತಿಗಳ ಹೆಮ್ಮೆ. ಕುಟುಂಬ ಅಭಿವೃದ್ಧಿಯ ಹೊಸ ಗುರುತು. ಜನಸಂಖ್ಯೆ ಸ್ಫೋಟದ ಪರಿಣಾಮ ನಿಮ್ಮ ಕುಟುಂಬಗಳ ಮೇಲೆ ಹೊರೆಯಾಗದಿರಲಿ. ಮಕ್ಕಳ ಆರೈಕೆ ಶಿಕ್ಷಣ ಲಾಲನೆ ಪಾಲನೆಗಳಿಗೆ ಆರ್ಥಿಕ ಹೊರೆ ಬೀಳದಂತೆ ಇಂದೇ ಕುಟುಂಬ ಯೋಜನೆಯಲ್ಲಿ ತೊಡಗಿಸಿಕೊಳ್ಳಿ ಈ ನಿಟ್ಟಿನಲ್ಲಿ ಅತ್ತೆಯರು ತಮ್ಮ ತಮ್ಮ ಸೊಸೆಯಂದಿರಿಗೆ ಸಲಹೆ ಸೂಚನೆಗಳನ್ನು ನೀಡಿ ಕುಟುಂಬ ಯೋಜನೆಯಲ್ಲಿ ಪುರುಷರ ಭಾಗವಹಿಸುವಿಕೆ ಪ್ರಮಾಣ ಅತಿ ಕಡಿಮೆ ಇದೆ. ಪುರುಷರಿಗಾಗಿ ಇಲಾಖೆಯಲ್ಲಿ " ನೋ ಸ್ಕಾಲ್ ಪೆಲ್ ವ್ಯಾಸೆಕ್ಟಮಿ ಸರಳ ಹಾಗೂ ಸುರಕ್ಷಿತ, ಗಾಯ ಮತ್ತು ಹೊಲಿಗೆ ಇಲ್ಲದ ವಿಧಾನ ಈ ಶಸ್ತ್ರಚಿಕಿತ್ಸೆಯನ್ನು 5 ರಿಂದ 10 ನಿಮಿಷದಲ್ಲಿ ಮಾಡಬಹುದಾದ ಪ್ರಕ್ರಿಯೆ ಅರ್ದ ಗಂಟೆಯಲ್ಲಿ ಮನೆಗೆ ಹೋಗಬಹುದು. ಯಾವುದೇ ರೀತಿಯ ಲೈಂಗಿಕ ನಿಶ್ಯಕ್ತಿ ಮತ್ತು ಪುರುಷತ್ವಕ್ಕೆ ದಕ್ಕೆಯಾಗುವುದಿಲ್ಲ. ಅಡ್ಡ ಪರಿಣಾಮವು ಇರುವುದಿಲ್ಲ. ಸಮಾಲೋಚನೆಯಲ್ಲಿ ಭಾಗವಹಿಸಿದ ಅತ್ತೆ ಸೊಸೆಯರು ನಿಮ್ಮ ಕುಟುಂಬದಲ್ಲಿ ಈ ಬಗ್ಗೆ ಚರ್ಚಿಸಿ ತೀರ್ಮಾನ ಕೈಗೊಳ್ಳಿ. ಯೋಜನೆಯನ್ನು ಸಫಲತೆಗೊಳಿಸಿಕೊಳ್ಳಿರಿ ಎಂದರು.

ಕಾರ್ಯಕ್ರಮದಲ್ಲಿ ಪ್ರಾಥಮಿಕ ಆರೋಗ್ಯ ಸುರಕ್ಷತಾಧಿಕಾರಿ ಮಂಜೂಷಾ, ಅಂಗನವಾಡಿ ಕಾರ್ಯಕರ್ತೆ ಭಾರತಿ, ಈರಮ್ಮ , ಆಶಾ ಕಾರ್ಯಕರ್ತೆಯರಾದ ವಾಣಿ ಪುಷ್ಪ, ಅಕ್ತರ್ ಫಾತಿಮ 30 ಜನ ಅತ್ತೆ ಸೊಸೆಯರು ಇದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T